ಸಂಪುಟ : 9 ಸಂಚಿಕೆ 258 ಪುಟ : 4 ಬೆಲೆ: 3.00 ಶನಿವಾರ ನವೆಂಬರ್ 23 2024 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ...
VIJAYA SAKSHI KANNADA DAILY ಕನ್ನಡ ದಿನಪತ್ರಿಕೆ




Volume : 9 Issue : 258 Pages : 4 Price : 3.00 Saturday November 23 2024 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25

## ಗದಗ-ಬೆಟಗೇರಿ: ವಿವಿಧೆಡೆ ನೀರು ಪೂರೈಕೆ ವಿವರ

■ ವಿಜಯಸಾಕ್ಷಿ ಸುದ್ದಿ, ಗದಗ

ಗದಗ-ಬೆಟಗೇರಿ ಅವಳಿ ನಗರದಲ್ಲಿ ನವೆಂಬರ್ 23 ರಂದು ಈ ಕೆಳಗಿನ ಸ್ಥಳಗಳಿಗೆ ನೀರು ಪೂರೈಕೆ ಮಾಡಲಾಗುವುದು ಎಂದು ನಗರಸಭೆ ಅಧಿಕಾರಿಗಳು ತಿಳಿಸಿದ್ದಾರೆ.

ಸ್ಥಳಗಳ ವಿವರ: ವಾರ್ಡ್ ನಂ. 21, 22 – ವಿಜಯನಗರ ಶಾಲೆ, ಕರುಗಲ್ ಲೇಔಟ್, ಶಿಗ್ಲಾವಿ ಲೇಔಟ್, ಕಮತರ ಪ್ಲಾಟ್, ವಾಲ್ಮೀಕಿ ಭವನ, ಹನುಮಂತ ದೇವರು ಗುಡಿ, ಗಾರ್ಡನ್, ಟವರ್ ಕಂಬ ಉಳಿದ ಕೆಲವು ಭಾಗಗಳು. ವಾರ್ಡ್ ನಂ 6 – ಮಾಕಾಪುರ, ಪವಾರ, ನಾವಳ್ಳಿ, ಮಳಲಿ ಪೂಜಾರ, ಪಣಿಭಂಡ್ ತಟ್ಟಿಯವರ ಲೈನ್‌ಗಳು, ಉಳಿದ ಕೆಲವು ಭಾಗಗಳು.

ವಾರ್ಡ್ ನಂ. 33 – ನಾವಳ್ಳಿ, ಪಿಡ್ಡಿ, ಬಸಯ್ಯರವರ ಲೈನ್‌ಗಳು, ಕೇಶವ ನಗರ, ಬ್ಯಾಂಕರ್ಸ್ ಕಾಲೋನಿ, ಜಾಕೀರ್ ಹುಸೇನ ಕಾಲೋನಿ, ಹುಬ್ಬಳ್ಳಿ ರಸ್ತೆ ಉಳಿದ ಕೆಲವು ಭಾಗಗಳು. ವಾರ್ಡ್ ನಂ. 30, 34 – ವಡ್ಡರಗೇರಿ, ಮೂರು ಶಿಳ್ಳಿನ ವಕಾರ, ಕೊರವರ ಓಣಿ, 46 ಪ್ಲಾಟ್, ಶಿವಾನಂದ ಗಾರ್ಡನ್, ಬಸವೇಶ್ವರ ಶಾಲೆ, ಡಿಪೋ ಹಿಂದಿನ ಭಾಗ, 1ನೇ ಕ್ರಾಸ್ ಉಳಿದ ಕೆಲವು ಭಾಗಗಳು.

ವಾರ್ಡ್ ನಂ. 26 – ಹಳೆ ಬಸ್ ಸ್ಟ್ಯಾಂಡ್ ರಸ್ತೆ, ಕಾಯಿಪಲ್ಲೆ ಮಾರ್ಕೆಟ್, ದನದ ದವಾಖಾನೆ, ಉರ್ದು ಶಾಲೆಯ ಕೆಳಗಿನ ಭಾಗ ಉಳಿದ ಕೆಲವು ಭಾಗಗಳು. ವಾರ್ಡ್ ನಂ. 29 – ಟೀಚರ್ಸ್ ಕಾಲೋನಿ ಎಲ್ಲಾ ಭಾಗಗಳು. ವಾರ್ಡ್ ನಂ. 1 – ಎಸ ಎಂ ಕೃಷ್ಣ ನಗರ ಕೆಳಗಿನ ಭಾಗ.

ತುಂಗಭದ್ರಾ ನದಿಯಿಂದ ಪೂರೈಕೆ ಮಾಡಿದ ನೀರನ್ನು ಸಂಗ್ರಹಣೆ ಮಾಡಿದ ನಂತರ ಹೊಸ ನೀರು ಸಂಗ್ರಹವಾಗಿರುವುದರಿಂದ ಕಡ್ಡಾಯವಾಗಿ ಕಾಯಿಸಿ ಆರಿಸಿ ಕುಡಿಯಲು ಉಪಯೋಗಿಸತಕ್ಕದ್ದು ಎಂದು ಗದಗ-ಬೆಟಗೇರಿ ನಗರಸಭೆ ಪೌರಾಯುಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಶತಮಾನೋತ್ಸವದ ವಿಶೇಷ ಕಾರ್ಯಕ್ರಮ ಇಂದು

■ ವಿಜಯಸಾಕ್ಷಿ ಸುದ್ದಿ, ಗದಗ

ಶಿರಹಟ್ಟಿ ತಾಲೂಕಿನ ಬನ್ನಿಕೊಪ್ಪ ಗ್ರಾಮದಲ್ಲಿ ಜಗದ್ಗುರು ಅನ್ನದಾನೀಶ್ವರ ಪದವಿಪೂರ್ವ ಮಹಾವಿದ್ಯಾಲಯ ಹಾಗೂ ಪ್ರೌಢಶಾಲೆ ಆವರಣದಲ್ಲಿ ಮುಂಡರಗಿ ಶ್ರೀ ಜಗದ್ಗುರು ಅನ್ನದಾನೀಶ್ವರ ವಿದ್ಯಾಸಮಿತಿಯ ಶತಮಾನೋತ್ಸವ ಸಂಭ್ರಮದ ವಿಶೇಷ ಕಾರ್ಯಕ್ರಮ ನ.23ರಂದು ಬೆಳಿಗ್ಗೆ 10.30ಕ್ಕೆ ಜರುಗಲಿದೆ.

ಮುಂಡರಗಿ ಶ್ರೀ ಜಗದ್ಗುರು ಅನ್ನದಾನೀಶ್ವರ ಮಠದ ಉತ್ತರಾಧಿಕಾರಿ ಮಲ್ಲಿಕಾರ್ಜುನ ಸ್ವಾಮೀಜಿ ಹಾಗೂ ಬನ್ನಿಕೊಪ್ಪದ ಡಾ. ಸುಜ್ಞಾನದೇವ ಶಿವಾಚರ್ಯ ಶ್ರೀಗಳು ನೇತೃತ್ವ ವಹಿಸುವರು. ಸ್ಥಾನಿಕ ಆಡಳಿತ ಮಂಡಳಿ ಅಧ್ಯಕ್ಷ ಮಹಾವೀರ ಮಂಟಗಣಿ ಅಧ್ಯಕ್ಷತೆ ವಹಿಸುವರು. ನಿವೃತ್ತ ಪ್ರಾಧ್ಯಾಪಕ ಶಂಭು ಬಳಿಗಾರ, ಮುಖಂಡರಾದ ರಾಮಸ್ವಾಮಿ ಹೆಗ್ಗಡಾಳ, ಶೋಭಾ ಹೌಂಸಿ, ಡಾ. ಬಿ.ಜಿ. ಜವಳಿ, ಆರ್.ಆರ್. ಗಡ್ಡದೇವರಮಠ ಸೇರಿ ಹಲವರು ಪಾಲ್ಗೊಳ್ಳುವರು.

ನಂತರ ಮಧ್ಯಾಹ್ನ 2.30ಕ್ಕೆ ಕೃಷಿಗೋಷ್ಠಿ ನಡೆಯಲಿದ್ದು, ಧಾರವಾಡ ಕೃಷಿ ವಿಶ್ವವಿದ್ಯಾಲಯದ ಕೃಷಿ ಅರಣ್ಯ ವಿಭಾಗದ ಮುಖ್ಯಸ್ಥ ಡಾ. ಎಚ್.ವೈ. ಪಾಟೀಲ ಉಪನ್ಯಾಸ ನೀಡುವರು. ತಾಂತ್ರಿಕ ಅಧಿಕಾರಿ ಎಸ್.ಎಂ. ಗಟನಟ್ಟಿ, ಬಿ.ಎಂ. ಈಟಿ, ಎಸ್.ಎನ್. ಮೇಟಿ, ಎಸ್.ಎಸ್. ಇನಾಮತಿ ಪಲ್ಗೊಳ್ಳುವರು ಎಂದು ಪ್ರಕಟಣೆ ತಿಳಿಸಿದೆ.

### ಪ್ರಾಚ್ಯಾವಶೇಷಗಳ ಅನ್ವೇಷಣೆ ನಿಮಿತ್ತ ಅಧಿಕಾರಿಗಳಿಗೆ, ಸ್ವಯಂ ಸೇವಕರಿಗೆ ತರಬೇತಿ

# ಪ್ರಾಚ್ಯಾವಶೇಷಗಳ ಅನ್ವೇಷಣೆಯನ್ನು ಯಶಸ್ವಿಗೊಳಿಸಿ

■ ವಿಜಯಸಾಕ್ಷಿ ಸುದ್ದಿ, ಗದಗ

ಇತಿಹಾಸ ಬಲ್ಲವರು ಮಾತ್ರ ಇತಿಹಾಸ ಸೃಷ್ಟಿಸುತ್ತಾರೆ. ಪಾರಂಪರಿಕ ಲಕ್ಕುಂಡಿ ಕ್ಷೇತ್ರದ ಅನ್ವೇಷಣೆ ಮೂಲಕ ಇತಿಹಾಸ ತಿಳಿದು, ಲಭ್ಯವಿರುವ ಪ್ರಾಚ್ಯ ವಸ್ತುಗಳನ್ನು ಸಂರಕ್ಷಣೆ ಮಾಡುವುದು ನಮ್ಮೆಲ್ಲರ ಕರ್ತವ್ಯವಾಗಿದೆ ಎಂದು ಜಿಲ್ಲಾಧಿಕಾರಿ ಗೋವಿಂದರೆಡ್ಡಿ ಹೇಳಿದರು.

ನಗರದ ಜಿಲ್ಲಾಡಳಿತ ಭವನದ ಆಡಿಟೋರಿಯಂ ಹಾಲ್‌ನಲ್ಲಿ ಶುಕ್ರವಾರ ಪ್ರವಾಸೋದ್ಯಮ ಇಲಾಖೆ ಬೆಂಗಳೂರು, ಮೈಸೂರಿನ ಪುರಾತತ್ವ ಸಂಗ್ರಹಾಲಯಗಳು ಮತ್ತು ಪರಂಪರೆ ಇಲಾಖೆ, ಜಿಲ್ಲಾಡಳಿತ, ಜಿಲ್ಲಾ ಪಂಚಾಯತ, ಲಕ್ಕುಂಡಿ ಪಾರಂಪರಿಕ ಪ್ರದೇಶ ಅಭಿವೃದ್ಧಿ ಪ್ರಾಧಿಕಾರ ಹಾಗೂ ಗ್ರಾಮ ಪಂಚಾಯತ ಲಕ್ಕುಂಡಿ ಇವರುಗಳ ಸಹಯೋಗದಲ್ಲಿ ಲಕ್ಕುಂಡಿ ಪಾರಂಪರಿಕ ಪ್ರದೇಶ ಅಭಿವೃದ್ಧಿ ಪ್ರಾಧಿಕಾರ ವ್ಯಾಪ್ತಿಯಲ್ಲಿ ಪ್ರಾಚ್ಯಾವಶೇಷಗಳ ಅನ್ವೇಷಣೆ ನಿಮಿತ್ತ ಅಧಿಕಾರಿಗಳಿಗೆ ಹಾಗೂ ಸ್ವಯಂ ಸೇವಕರಿಗೆ ಹಮ್ಮಿಕೊಂಡಿದ್ದ ತರಬೇತಿ ಕಾರ್ಯಾಗಾರದ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಸಚಿವರು, ಅಧಿಕಾರಿಗಳು, ಸ್ವಯಂ ಸೇವಕರನ್ನು ಒಳಗೊಂಡ ತಂಡದ ಜೊತೆಗೆ ಈಗಾಗಲೇ ಗುರುತು ಮಾಡಿರುವ ಮನೆಗಳಿಗೆ ಹೋಗಿ ಪ್ರಾಚ್ಯ ವಸ್ತುಗಳನ್ನು ನೀಡುವ ಬಗ್ಗೆ ರಶೀದಿ ನೀಡಿ ಪುರಾತನ ವಸ್ತಗಳ ಭಾರದ ಆಧಾರದ ಮೇಲೆ ವಸ್ತುಗಳನ್ನು ಪಾಲಕಿಯಲ್ಲಿ, ಟ್ರ್ಯಾಕ್ಟರ್‌ಗಳಲ್ಲಿ ಸಂಗ್ರಹಿಸುವ ಕಾರ್ಯವಾಗಬೇಕು ಎಂದು ನುಡಿದರು.

ಈ ಪ್ರಾಚ್ಯಾವಶೇಷಗಳ ಅನ್ವೇಷಣೆ ಕಾರ್ಯವು ವಿದ್ಯಾರ್ಥಿ ಜೀವನದಲ್ಲಿಯೇ ಅತ್ಯುತ್ತಮ ಪ್ರಯೋಗಿಕ ಮತ್ತು ಉತ್ತಮ ಅನುಭವ ನೀಡುವ ಕೆಲಸವಾಗಲಿದೆ. ವಿದ್ಯಾರ್ಥಿಗಳು ಈ ಸಮಯವನ್ನು ಸದ್ಬಳಕೆ ಮಾಡಿಕೊಂಡು ಎಲ್ಲರಿಗೂ ಸಹಕಾರ ನೀಡಿ ಪ್ರಾಚ್ಯಾವಶೇಷಗಳ ಅನ್ವೇಷಣೆಯನ್ನು



ಯಶಸ್ವಿಗೊಳಿಸಬೇಕು ಎಂದು ತಿಳಿಸಿದರು.

ಪುರಾತತ್ವ ಸಂಗ್ರಹಾಲಯಗಳು ಮತ್ತು ಪರಂಪರೆ ಇಲಾಖೆ ನಿರ್ದೇಕರಾದ ಸ್ಮಿತಾ ಅವರು ಮಾತನಾಡಿ, ರಾಜರ ಕಾಲದಲ್ಲಿ ಲಕ್ಕುಂಡಿಯಲ್ಲಿ ಠಂಕಸಾಲೆ ಇತ್ತು ಎಂದು ಶಾಸನಗಳಲ್ಲಿ ಉಲ್ಲೇಖವಿದೆ. ಹಾಗಾಗಿ ಲಕ್ಕುಂಡಿಯಲ್ಲಿ ಮಹತ್ವ ಹಾಗೂ ಮೌಲ್ಯಯುತವಾದ ಶಾಸನ, ನಾಣ್ಯ, ಸ್ಮಾರಕದ ಸಂಪತ್ತಿದೆ. ಮಣ್ಣಿನಲ್ಲಿ ಹುದುಗಿಹೋದ ಸ್ಮಾರಕಗಳನ್ನು ಮರಳಿ ತೆಗೆಯುವ ಕಾರ್ಯ ಆಗಬೇಕು. ಪ್ರಾಚ್ಯಾವಶೇಷಗಳ ಅನ್ವೇಷಣೆಯಲ್ಲಿ ಕಣ್ಣಿಗೆ ಕಾಣುವ ಶಾಸನ, ಶಿಲ್ಪಕಲೆ, ದೇವಾಲಯ ಕುರಿತು ಸ್ಥಳೀಯರಿಗೆ ಇರುವ ಮಾಹಿತಿ ಅವರ ಆಚರಣೆಯನ್ನು ದಾಖಲಿಸಿ, ಪ್ರತಿಯೊಬ್ಬರ ಸಹಕಾರದಿಂದ ಲಕ್ಕುಂಡಿಯಲ್ಲಿ ಲಭ್ಯವಾಗುವ ಪ್ರಾಚ್ಯವಸ್ತುಗಳನ್ನು ಸಂಗ್ರಹಿಸಿ ವಸ್ತು ಸಂಗ್ರಹಾಲಯ ಮಾಡಿ, ಜಾಗತಿಕವಾಗಿ ಲಕ್ಕುಂಡಿಯ ಬಗ್ಗೆ ಗಮನ ಸೆಳೆದು ವಿಶ್ವದ ಪ್ರಸಿದ್ಧ ತಾಣವಾಗಿ ಮಾಡವ ಕಾರ್ಯವಾಗಬೇಕು ಎಂದು ಹೇಳಿದರು.

ಲಕ್ಕುಂಡಿ ಪಾರಂಪರಿಕ ಪ್ರದೇಶ ಅಭಿವೃದ್ಧಿ ಪ್ರಾಧಿಕಾರ ಆಯುಕ್ತರಾದ ಶರಣು ಗೋಗೇರಿ, ಲಕ್ಕುಂಡಿ ಪಾರಂಪರಿಕ ಪ್ರದೇಶ ಅಭಿವೃದ್ಧಿ ಪ್ರಾಧಿಕಾರದ ರಾಜ್ಯ ಮಟ್ಟದ ಸಲಹಾ ಸಮಿತಿ ಅಧ್ಯಕ್ಷರಾದ ಎಚ್.ಕೆ. ಪಾಟೀಲ, ಶಾಸಕ ಸಿ.ಸಿ. ಪಾಟೀಲ ಹಾಗೂ ವಿವಿಧ ಇಲಾಖೆಗಳ ಮುಖ್ಯಸ್ಥರುಗಳ ನೇತೃತ್ವದಲ್ಲಿ ಜರುಗುವ ಪ್ರಾಚ್ಯಾವಶೇಷಗಳ ಅನ್ವೇಷಣೆ ತಂಡಗಳ ವಿವರ ನೀಡಿ, ತಂಡದ ಕಾರ್ಯ ಹಾಗೂ ರೂಪುರೇಷೆ ತಿಳಿಸಿ ಸಂಪೂರ್ಣ ಪ್ರಾಚ್ಯಾವಶೇಷಗಳ ಅನ್ವೇಷಣೆ ಬಗ್ಗೆ ಮಾಹಿತಿ ನೀಡಿದರು.

ಈ ಸಂದರ್ಭದಲ್ಲಿ ಎನ್‌ಎಸ್‌ಎಸ್, ಎನ್‌ಸಿಸಿ, ಸ್ವಯಂ ಸೇವಕರು, ಪ್ರವಾಸಿ ಗೈಡ್, ಇತಿಹಾಸ ಉಪನ್ಯಾಸಕರು ಸೇರಿದಂತೆ ವಿವಿಧ ಇಲಾಖೆ ಅಧಿಕಾರಿಗಳು, ವಿದ್ಯಾರ್ಥಿಗಳು ಹಾಜರಿದ್ದರು.

> ಲಕ್ಕುಂಡಿಯ ಮನೆಗಳಲ್ಲಿ, ಅಂಗಳದಲ್ಲಿ, ತಿಪ್ಪೆಗಳಲ್ಲಿ ಸ್ಮಾರಕಗಳು ಇವೆ. ಜನರಿಗೆ ಅದರ ಬಗ್ಗೆ ಅರಿವಿಲ್ಲದಿದ್ದರೂ, ಲಭ್ಯವಿರುವ ಶಾಸನ, ಶಿಲೆ, ಸ್ಮಾರಕ, ನಾಣ್ಯ ಇತ್ಯಾದಿಗಳ ಕುರಿತು ಜನರಲ್ಲಿ ಅರಿವು ಮೂಡಿಸಿ, ಪ್ರಾಚ್ಯ ವಸ್ತುಗಳನ್ನು ಅವರಿಂದ ಪಡೆದುಕೊಂಡು ಶೇಖರಣೆ ಮಾಡುವುದು ಈ ಕಾರ್ಯಾಗಾರದ ಮುಖ್ಯ ಉದ್ದೇಶವಾಗಿದೆ. ಲಕ್ಕುಂಡಿಗೆ ತೆರಳಿ ಸಚಿವರ ಸಂದೇಶ ಪತ್ರವನ್ನು ನೀಡಿ, ಯಾವ ಓಣಿಗಳಲ್ಲಿ ಯಾರ ಮನೆಗಳಲ್ಲಿ ಸ್ಮಾರಕಗಳು ಲಭ್ಯವಿವೆ ಎನ್ನುವ ಮಾಹಿತಿಯನ್ನು ಕಲೆಹಾಕಿ ಪಟ್ಟಿ ಮಾಡಿ, ಅಂತಹ ಮನೆಗಳನ್ನು ಗುರುತು ಮಾಡಬೇಕು ಎಂದು ಜಿಲ್ಲಾಧಿಕಾರಿ ಗೋವಿಂದರೆಡ್ಡಿ ಹೇಳಿದರು.



### ವಕ್ಫ್ ಕಾಯ್ದೆ ವಿರುದ್ಧ ಬಿಜೆಪಿ ಹಮ್ಮಿಕೊಂಡಿದ್ದ ಪ್ರತಿಭಟನೆಯಲ್ಲಿ ಶಾಸಕ ಸಿ.ಸಿ. ಪಾಟೀಲ ಆಕ್ರೋಶ

# ರಾಜ್ಯ ಸರ್ಕಾರದಿಂದ ರೈತರ ಮೇಲೆ ದಬ್ಬಾಳಿಕೆ

■ ವಿಜಯಸಾಕ್ಷಿ ಸುದ್ದಿ, ಗದಗ

ಕಾಂಗ್ರೆಸ್ ಸರ್ಕಾರ ಒಂದು ಸಮುದಾಯದ ತುಷ್ಟೀಕರಣಕ್ಕಾಗಿ ವಕ್ಫ್ ಕಾಯ್ದೆ ಮೂಲಕ ರೈತರ ಮೇಲೆ ದಬ್ಬಾಳಿಕೆ ನಡೆಸುತ್ತಿದೆ. ಸಿದ್ದರಾಮಯ್ಯನವರು ಪದೇ-ಪದೆ ಅಹಿಂದ ನಾಯಕ ಎಂದು ಹೇಳುತ್ತಾ, ಅದೇ ಸಮುದಾಯಕ್ಕೆ ಸೇರುವ ವಾಲ್ಮೀಕಿ ಜನಾಂಗದ ಹಣವನ್ನು ಲೂಟಿ ಮಾಡಿ ತೆಲಂಗಾಣ ಚುನಾವಣೆಗೆ ಬಳಸಿ ವಾಲ್ಮೀಕಿ ಜನಾಂಗಕ್ಕೆ ಅನ್ಯಾಯ ಮಾಡಿದ್ದಾರೆ ಎಂದು ಮಾಜಿ ಸಚಿವ, ಹಾಲಿ ಶಾಸಕ ಸಿ.ಸಿ. ಪಾಟೀಲ ಕಾಂಗ್ರೆಸ್ ಸರ್ಕಾರದ ವಿರುದ್ಧ ವಾಗ್ದಾಳಿ ನಡೆಸಿದರು.

ನಗರದ ಗಾಂಧಿ ಸರ್ಕಲ್‌ನಲ್ಲಿ ವಕ್ಫ್ ಕಾಯ್ದೆ ವಿರುದ್ಧ ಹಮ್ಮಿಕೊಂಡಿದ್ದ ಪ್ರತಿಭಟನೆಯಲ್ಲಿ ಪಾಲ್ಗೊಂಡು ಮಾತನಾಡಿದ ಅವರು, ಹಿಂದೂಗಳ ಆಸ್ತಿಯನ್ನು ಹಿಂದೂಗಳಿಗೆ ಉಳಿಸುವ ಉದ್ದೇಶದಿಂದ ಬಿಜೆಪಿ ವತಿಯಿಂದ 'ನಮ್ಮ ಭೂಮಿ, ನಮ್ಮ ಹಕ್ಕು' ಶೀರ್ಷಿಕೆಯಡಿ ರಾಜ್ಯಾಧ್ಯಕ್ಷ ಬಿ.ವೈ ವಿಜಯೇಂದ್ರರ ಸೂಚನೆಯಂತೆ ಹೋರಾಟ ನಡೆಸುತ್ತಿದೆ. 2 ವರ್ಷಗಳ ಅವಧಿಯಲ್ಲಿ



ಅಭಿವೃದ್ಧಿಯ ಪರವಾಗಿ ಯಾವುದೇ ಚರ್ಚೆಯಾಗಿಲ್ಲ ಎಂದು ಕಾಂಗ್ರೆಸ್ ಸರ್ಕಾರದ ವಿರುದ್ಧ ಕಿಡಿ ಕಾರಿದರು.

ಇಂದು ರಾಜ್ಯ ದಿವಾಳಿಯ ಅಂಚಿನಲ್ಲಿದೆ. ಮಹಿಳೆಯರು 2 ಸಾವಿರ ರೂ.ಗೆ ಆಸೆ ಬಿದ್ದು ಕಾಂಗ್ರೆಸ್‌ಗೆ ಮತ ಹಾಕಿದರು. ಈಗ ಅವರ ಗಂಡನ ಆಸ್ತಿ ವಕ್ಫ್ ಪಾಲಾಗುತ್ತಿದೆ. ನರಗುಂದದಲ್ಲಿ 770 ಎಕರೆ ಆಸ್ತಿ ವಕ್ಫ್ ಸೇರಿದೆ. ಲಕ್ಕುಂಡಿಯ ಹಿಂದೂರುದ್ರಭೂಮಿ, ಅನ್ನದಾನೇಶ್ವರ ಮಠಗಳು ವಕ್ಫ್ ಆಸ್ತಿಯಾಗಿ ಬದಲಾಗಿದೆ ಎಂದು ವಿವರಿಸಿದರು.

ಶಿರಹಟ್ಟಿ ಶಾಸಕ ಡಾ. ಚಂದ್ರು ಲಮಾಣಿ ಮಾತನಾಡಿ, ರಾಜ್ಯದಲ್ಲಿ ಕಾಂಗ್ರೆಸ್ ಸರ್ಕಾರದ ನೀತಿಯಿಂದ ರೈತರು ಕಂಗಾಲಾಗಿದ್ದಾರೆ. ರಾಜ್ಯದ ಹಲವಾರು ಜಿಲ್ಲೆಗಳಲ್ಲಿ ರೈತರಿಗೆ ನೋಟಿಸ್ ನೀಡದೇ ಆಸ್ತಿಯನ್ನು ವಕ್ಫ್‌ಗೆ ಸೇರಿಸಲಾಗಿದೆ.

ಬಿಜೆಪಿಯಿಂದ ಹೋರಾಟದ ಮುನ್ಸೂಚನೆ ಸಿಗುತ್ತಿದ್ದಂತೆ ನೋಟಿಸ್ ವಾಪಾಸ್ ಪಡೆಯುವಂತೆ ಅಧಿಕಾರಿಗಳಿಗೆ ಸೂಚಿಸಿದ್ದೇನೆ ಎಂದು ಸಿಎಂ ಹೇಳುತ್ತಾರೆ. ಆದರೆ, ಸಿಎಂ ಹೇಳಿದಂತೆ ನೋಟಿಸ್ ವಾಪಾಸ್ ಪಡೆಯಲು ಆಗುವುದಿಲ್ಲ. ಬದಲಾಗಿ ಕಾನೂನಿನಲ್ಲಿ ಬದಲಾವಣೆ ಆಗಬೇಕು ಎನ್ನುವ ಕನಿಷ್ಠ ಜ್ಞಾನ ಸಿಎಂ ಸಿದ್ದರಾಮಯ್ಯನವರಿಗೆ ಇಲ್ಲ ಎಂದು ಆಕ್ರೋಶ ವ್ಯಕ್ತಪಡಿಸಿದರು.

▶▶ 3ನೇ ಪುಟಕ್ಕೆ

> ರಾಜ್ಯದಲ್ಲಿ ಆಡಳಿತ ನಡೆಸುತ್ತಿರುವ ಸಿದ್ದರಾಮಯ್ಯ ನಾಯಕತ್ವದ ಕಾಂಗ್ರೆಸ್ ಸರ್ಕಾರ ಕೇವಲ ಒಂದು ಕೋಮಿನ ಜನರನ್ನು ಓಲೈಸಲು ರೈತರ ಭೂಮಿಯನ್ನು ಕಬಳಿಸುತ್ತಿದೆ. ಧರ್ಮದ ಹೆಸರಿನಲ್ಲಿ ಭೂಮಿ ಕಸಿದು ರೈತರನ್ನು ಸಂಕಷ್ಟದ ಸ್ಥಿತಿಗೆ ದೂಡಲಾಗಿದೆ. ಕಾಂಗ್ರೆಸ್ ಸರ್ಕಾರ ಸರ್ವರಲ್ಲಿ ಅಶಾಂತಿ ಮೂಡುವಂತೆ ಮಾಡುತ್ತಿದೆ. ಈ ವಿಷಯವನ್ನು ಬಿಜೆಪಿ ಗಂಭೀರವಾಗಿ ಪರಿಗಣಿಸಿ ರಾಜ್ಯಾದ್ಯಂತ ಪ್ರತಿಭಟನೆ ನಡೆಸುತ್ತಿದೆ.
>
> **– ನಾಗರಾಜ ಕುಲಕರ್ಣಿ.**
> ಬಿಜೆಪಿ ಮುಖಂಡ.

## ಉಸ್ತುವಾರಿ ಸಚಿವ ಡಾ.ಎಚ್.ಕೆ. ಪಾಟೀಲ ಪ್ರವಾಸ

■ ವಿಜಯಸಾಕ್ಷಿ ಸುದ್ದಿ, ಗದಗ

ರಾಜ್ಯದ ಕಾನೂನು, ನ್ಯಾಯ ಮತ್ತು ಮಾನವ ಹಕ್ಕುಗಳು, ಸಂಸದೀಯ ವ್ಯವಹಾರಗಳು, ಶಾಸನ ರಚನೆ ಮತ್ತು ಪ್ರವಾಸೋದ್ಯಮ ಇಲಾಖೆ ಹಾಗೂ ಗದಗ ಜಿಲ್ಲಾ ಉಸ್ತುವಾರಿ ಸಚಿವ ಡಾ.ಎಚ್.ಕೆ. ಪಾಟೀಲ ಅವರ ನವೆಂಬರ್ 23 ಹಾಗೂ 24 ರ ಗದಗ ಜಿಲ್ಲಾ ಪ್ರವಾಸದ ವಿವರ ಇಂತಿದೆ.

ನವೆಂಬರ್ 23 ರಂದು ಗದಗ ನಲ್ಲಿ ನಿಯೋಜಿತ ಕಾರ್ಯಕ್ರಮಗಳಲ್ಲಿ ಭಾಗವಹಿಸುವರು. ನಂತರ ಅಧಿಕಾರಿಗಳೊಂದಿಗೆ ಸಭೆ ನಡೆಸುವರು. ಸಾಯಂಕಾಲ 5:00 ಗಂಟೆಗೆ ವಾರ್ಡ್ ನಂಬರ್ 35 ರಲ್ಲಿ ಸಿಸಿ ರಸ್ತೆ ಹಾಗೂ ಗಟಾರ ನಿರ್ಮಾಣ ಕಾಮಗಾರಿಯ ಭೂಮಿ ಪೂಜೆ ನೆರವೇರಿಸುವರು. 5:30 ಗಂಟೆಗೆ ವಾರ್ಡ್ ನಂಬರ್ 30ರ ಮುಂಡರಗಿ ರಸ್ತೆ ವಾಂಬೆ ಬಡಾವಣೆಗಳಲ್ಲಿ ನೂತನವಾಗಿ ನಿರ್ಮಾಣ ಮಾಡುತ್ತಿರುವ ಮನೆಗಳ ಭೂಮಿ ಪೂಜೆ ಕಾರ್ಯಕ್ರಮದಲ್ಲಿ ಪಾಲ್ಗೊಂಡು ಗದಗನಲ್ಲಿ ವಾಸ್ತವ್ಯ ಮಾಡುವರು.

ನವೆಂಬರ್ 24ರಂದು ಬೆಳಗ್ಗೆ 9:30 ಬಸವೇಶ್ವರ ದೇವಸ್ಥಾನದ ಆವರಣದಲ್ಲಿ ಲಕ್ಕುಂಡಿ ಅಭಿವೃದ್ಧಿ ಪ್ರಾಧಿಕಾರದ ಪ್ರಾಚ್ಯಾವವೇಶಗಳ ಅನ್ವೇಷಣ ಕಾರ್ಯಕ್ರಮದಲ್ಲಿ ಪಾಲ್ಗೊಳ್ಳುವರು ಎಂದು ಸಚಿವರ ಕಾರ್ಯಲಯ ಪ್ರಕಟಣೆ ತಿಳಿಸಿದೆ.

### ಪ್ರಾಚ್ಯಾವಶೇಷಗಳ ಅನ್ವೇಷಣೆಯಲ್ಲಿ ಪಾಲ್ಗೊಳ್ಳುವಂತೆ ಲಕ್ಕುಂಡಿ ಗ್ರಾಮಸ್ಥರಿಗೆ ಸಚಿವ ಡಾ. ಎಚ್.ಕೆ. ಪಾಟೀಲ ಮನವಿ

# ಲಕ್ಕುಂಡಿ ವೈಭವ ಉಳಿಸಿ-ಬೆಳೆಸಲು ಕೈಜೋಡಿಸಿ


■ ವಿಜಯಸಾಕ್ಷಿ ಸುದ್ದಿ, ಗದಗ

ನಮ್ಮ ನಿಮ್ಮೆಲ್ಲರ ಹೆಮ್ಮೆಯ ಲಕ್ಕುಂಡಿ ಗ್ರಾಮದ ಮೊದಲ ಹೆಸರು 'ಲೊಕ್ಕಿ ಗುಂಡಿ', ಎಂದರೆ ಸಾಕ್ಷಾತ್ ಲಕ್ಷ್ಮಿಯ ನೆಲೆ ಎಂದರ್ಥ. ಈ ಗ್ರಾಮವು 'ದೇವಾಲಯಗಳ ಸ್ವರ್ಗ'ವೆಂದು ಹೆಸರಾಗಿದೆ. ಲಕ್ಕುಂಡಿ ಕನ್ನಡದ ರತ್ನತ್ರಯರಲ್ಲಿ ಒಬ್ಬರಾದ ರನ್ನ ಕವಿಗೆ ಆಶ್ರಯ ನೀಡಿದ್ದ ಕವಿವರ ಕಾಮಧೇನು, ದಾನಚಿಂತಾಮಣಿ ಎಂದು ಪ್ರಸಿದ್ಧಳಾದ ಅತ್ತಿಮಬ್ಬೆಗೆ ಉಸಿರಿತ್ತು ಹೆಸರಾದ ಪಾವನ ಭೂಮಿ. ಶರಣ ಸಹೋದರ-ಸಹೋದರಿಯರಾದ ಮುಕ್ತಾಯಿಯಕ್ಕ ಮತ್ತು ಅಜಗಣ್ಣನವರ ಜನ್ಮಭೂಮಿಯಾಗಿದೆ. ಇಂತಹ ಲಕ್ಕುಂಡಿಯ ಗ್ತತವೈಭವವನ್ನು ಪುನಃ ಸ್ಥಾಪಿಸಲು ಸಾರ್ವಜನಿಕರು ಕೈಜೋಡಿಸಿ ಎಂದು ಕಾನೂನು, ಪ್ರವಾಸೋದ್ಯಮ, ಜಿಲ್ಲಾ ಉಸ್ತುವಾರಿ ಸಚಿವೆಚ್.ಕೆ. ಪಾಟೀಲ ಮನವಿ ಮಾಡಿದ್ದಾರೆ.

ಕಲ್ಯಾಣ ಚಾಳುಕ್ಯರು, ಹೊಯ್ಸಳರು, ಕಲಚುರ್ಯ ಅರಸರು ಸಾವಿರ ವರ್ಷಗಳ ಹಿಂದೆ ಹಾಕಿಸಿರುವ ಶಾಸನಗಳ ಪ್ರಕಾರ ಲಕ್ಕುಂಡಿ ಸಾಕ್ಷಾತ್ ಶ್ರೀರಾಮನಿಂದ ನಿರ್ಮಿತವಾದ ಮಹಾ ಅಗ್ರಹಾರ, ಪಾವನ ಚರಿತ್ರಳಾದ ದಾನಚಿಂತಾಮಣಿ ಅತ್ತಿಮಬ್ಬೆಯ ಕರ್ಮಭೂಮಿ. ಒಳ್ಳೆಯತನಕ್ಕೆ, ಧರ್ಮಕ್ಕೆ, ಲಕ್ಷ್ಮಿಗೆ ತವರು ಮನೆಯಂತಿದ್ದ ಲಕ್ಕುಂಡಿ ಗ್ರಾಮವು ಇಂದ್ರನ ಅಮರಾವತಿಗಿಂತಲೂ ಶ್ರೇಷ್ಠವಾಗಿದ್ದು, ಅಮರಾವತಿಯನ್ನು ಮತ್ತು ಲಕ್ಕುಂಡಿಯನ್ನು ತಕ್ಕಡಿಯಲ್ಲಿಟ್ಟು ತೂಗಿದಾಗ ಲಕ್ಕುಂಡಿಯ ತೂಕವೇ ಹೆಚ್ಚಾಗಿತ್ತೆಂದು ಶಾಸನದಲ್ಲಿ ಹೇಳಲಾಗಿದೆ.

ಹೊಯ್ಸಳರ ರಾಜಧಾನಿಯಾಗಿದ್ದ ಲಕ್ಕುಂಡಿಯಲ್ಲಿ, 101 ದೇವಾಲಯಗಳು, 101 ಬಾವಿಗಳು ಇದ್ದವೆಂಬುದು ಪ್ರತೀತಿ. ಇವು ವೈವಿಧ್ಯಮಯವಾದ ವಾಸ್ತು ಶೈಲಿಯನ್ನು ಹೊಂದಿದ್ದು, ಆ ಕಾಲದಲ್ಲಿ ಕರ್ನಾಟಕದ ಶಿಲ್ಪಕಲಾ ಚಟುವಟಿಕೆಗಳ ಕಾರ್ಯಾಗಾರವಾಗಿತ್ತು. ಪ್ರಮುಖ ವ್ಯಾಪಾರಿ ಕೇಂದ್ರವೂ ಆಗಿದ್ದ ಲಕ್ಕುಂಡಿಯಲ್ಲಿ ಟಂಕಸಾಲೆ ಇದ್ದು, ಇಲ್ಲಿ ಮುದ್ರಿಸುತ್ತಿದ್ದ ನಾಣ್ಯಗಳು ರಾಜಮಾನ್ಯತೆಯನ್ನು ಪಡೆದಿತ್ತು. ನಮ್ಮ ಪೂರ್ವಜರು ದೇವಾಲಯಗಳನ್ನು ನಿರ್ಮಿಸಿ ಶಾಸನಗಳನ್ನು ಹಾಕಿಸುವಾಗ, ಸೂರ್ಯ ಚಂದ್ರ, ಆಕಾಶ, ಸಾಗರ, ಪರ್ವತಗಳಿರುವವರೆಗೂ ಅವುಗಳನ್ನು ರಕ್ಷಿಸಬೇಕೆಂದು ಕಳಕಳಿಯನ್ನು ವ್ಯಕ್ತಪಡಿಸಿದ್ದಾರೆ.

ನಮ್ಮ ಲಕ್ಕುಂಡಿ ಇಂದು ತನ್ನ ಗತವೈಭವವನ್ನು ಸಾರುತ್ತಿದೆ. ಆದರೆ, ಇಂದು ಕಾಲನ ಹೊಡೆತಕ್ಕೆ, ನಮ್ಮ ಅಲಕ್ಷ್ಯಕ್ಕೆ ಸಿಕ್ಕಿ ಕಣ್ಮರೆಯಾಗುತ್ತಿವೆ. ದೇವಾಲಯದ ಅವಶೇಷಗಳು ಎಲ್ಲೆಂದರಲ್ಲಿ ಚದುರಿ ಬಿದ್ದಿವೆ. ಇದು ನನಗೆ ಮಾತ್ರವಲ್ಲ, ನಮ್ಮೆಲ್ಲರಿಗೆ ತುಂಬಾ ನೋವನ್ನು ತಂದಿದೆ. ಹೀಗಾಗಿ ನಮ್ಮ ಪ್ರಾಚೀನ ಇತಿಹಾಸ ಮತ್ತು ಪರಂಪರೆಯನ್ನು ಸಂರಕ್ಷಿಸುವ ದಿಸೆಯಲ್ಲಿ ನಮ್ಮ ಸರ್ಕಾರ ಕಾರ್ಯೋನ್ಮುಖವಾಗಿದೆ.



ಅದರ ಫಲಿತವಾಗಿ, ಲಕ್ಕುಂಡಿ ಗ್ರಾಮವನ್ನು ಪುನರುತ್ಥಾನ ಮಾಡಲು ಗತವೈಭವ ಮರಳಿಸಲು ಮುಂದಡಿ ಇಟ್ಟಿದೆ. ನಿಮ್ಮ ಮನೆಗಳ ಬಳಿ ಚದುರಿ ಬಿದ್ದಿರುವ ಕಂಬಗಳು, ಭಗ್ನಗೊಂಡಿರುವ ಶಿಲ್ಪಗಳು, ಮನೆಯ ಮೆಟ್ಟಿಲಾಗಿರುವ ಶಾಸನಗಳು, ನಿರ್ಲಕ್ಷ್ಯಕ್ಕೊಳಗಾಗಿರುವ ತಾಳೆಗರಿಯ ಹಸ್ತಪ್ರತಿಗಳು ಇನ್ನೂ ಮುಂತಾದ ಐತಿಹಾಸಿಕ ಮಹತ್ವದ ಪ್ರಾಚ್ಯಾವಶೇಷಗಳನ್ನು ನೀಡುವಂತೆ ಕೋರಿ ನ.24ರಂದು ನಿಮ್ಮ ಮನೆಯ ಬಾಗಿಲಿಗೆ ಬಂದು ಸ್ವೀಕರಿಸುತ್ತೇವೆ. ನೀವು ಕೊಡುವ ಪ್ರಾಚ್ಯಾವಶೇಷಗಳನ್ನು ಅತ್ಯಂತ ವಿಶೇಷವಾದವುಗಳೆಂದು ಭಾವಿಸಿ, ಅವುಗಳನ್ನು ಸೂಕ್ತ ಸಂರಕ್ಷಣೆ ಮಾಡುತ್ತೇವೆ.

ವಿಶ್ವ ಭೂಪಟದಲ್ಲಿ ಹಂಪಿಯಂತೆಯೇ ಲಕ್ಕುಂಡಿಗೂ ಜಾಗತಿಕ ಮನ್ನಣೆ ತರುವ ನಮ್ಮ ಪ್ರಯತ್ನಕ್ಕೆ ನಿಮ್ಮ ಬೆಂಬಲ ಹಾಗೂ ಸಹಕಾರ ತುಂಬಾ ಅಗತ್ಯವಿದೆ. ಅಲಕ್ಷ್ಯಕ್ಕೊಳಗಾದ ಇತರ ಉದ್ದೇಶಗಳಿಗೆ ಬಳಸಲ್ಪಟ್ಟ ಪ್ರಾಚ್ಯಾವಶೇಷಗಳನ್ನು ಒಂದೆಡೆ ಕ್ರೋಢೀಕರಿಸಿ, ದೇವಾಲಯಗಳ ಅತಿಕ್ರಮಣವನ್ನು ತೆರವುಗೊಳಿಸಲು ಹಾಗೂ ಸ್ವಚ್ಛತೆಯನ್ನು ಕಾಪಾಡಿಕೊಳ್ಳುವ ನಿಟ್ಟಿನಲ್ಲಿ ತೋರುವ ಕಾಳಜಿಯೂ ಮಹತ್ತರವಾದ ಕಾಯಕವಾಗುತ್ತದೆ. ಆ ಮೂಲಕ ನಾವೆಲ್ಲರೂ ಸೇರಿ ಮತ್ತೆ ಲಕ್ಕುಂಡಿಯ ಚರಿತ್ರೆಯನ್ನು ಪುನರ್ನಿರ್ಮಾಣ ಮಾಡಿ, ಉಳಿಸಿ-ಬೆಳೆಸಲು ಸಾಧ್ಯವಾಗುತ್ತದೆ.

ನಮ್ಮ ಈ ಮಹತ್ತರ ಕಾರ್ಯದಲ್ಲಿ ನೀವೂ ಭಾಗಿಗಳಾಗಿ. ಲಕ್ಕುಂಡಿಯ ವೈಭವವನ್ನು ಪುನರ್‌ಸ್ಥಾಪಿಸುವ ನಮ್ಮ ನವೀನ ಪ್ರಯತ್ನದ ಭಾಗವಾಗಿ ಮನೆ-ಮನೆಯಿಂದ, ಹೊಳಗಟ್ಟಿಗಳಿಂದ ನಿಮ್ಮ ಪರಿಸರದ ಕಟ್ಟಿಗಟ್ಟಿಯಲ್ಲಿನ ಸ್ಮಾರಕಗಳ, ಸುಂದರ ಶಿಲ್ಪಕಲಾ ಕಲಾಕೃತಿಗಳ, ಪ್ರಾಚ್ಯಾವಶೇಷಗಳ ಅನ್ವೇಷಣೆಗೆ ನೀವೂ ಕೈಜೋಡಿಸಬೇಕೆಂದು ರಾಜ್ಯದ ಕಾನೂನು, ನ್ಯಾಯ ಮತ್ತು ಮಾನವ ಹಕ್ಕುಗಳು, ಸಂಸದೀಯ ವ್ಯವಹಾರಗಳು, ಶಾಸನ ರಚನೆ ಮತ್ತು ಪ್ರವಾಸೋದ್ಯಮ ಇಲಾಖೆ ಹಾಗೂ ಗದಗ ಜಿಲ್ಲಾ ಉಸ್ತುವಾರಿ ಸಚಿವ ಡಾ. ಎಚ್.ಕೆ. ಪಾಟೀಲ ವಿನಂತಿಸಿದ್ದಾರೆ.

## ಸಂಪಾದಕೀಯ

### ಬಿಪಿಎಲ್ ಕಾರ್ಡ್ ವಿಷಯದಲ್ಲೂ ಎಡವಿದೆ ಕಾಂಗ್ರೆಸ್ ಸರ್ಕಾರ

ಮುಡಾ ಹಗರಣ, ವಕ್ಫ್ ವಿವಾದ ನಿರ್ವಹಣೆಯಲ್ಲಿ ಎಡವಿದ್ದ ರಾಜ್ಯ ಕಾಂಗ್ರೆಸ್ ಸರ್ಕಾರ, ಬಿಪಿಎಲ್ ಕಾರ್ಡ್ ಹೊಂದಿರುವ ಅನರ್ಹರನ್ನ ಗುರುತಿಸುವ ವಿಷಯದಲ್ಲೂ ಮತ್ತೊಮ್ಮೆ ತಪ್ಪು ಮಾಡಿ ಇಕ್ಕಟ್ಟಿಗೆ ಸಿಲುಕಿದೆ.

ಬಿಪಿಎಲ್ ಕಾರ್ಡ್ ಹೊಂದಿರುವ ಅನರ್ಹರನ್ನು ಗುರುತಿಸುವ ಪ್ರಕ್ರಿಯೆ ಆರಂಭಿಸುತ್ತಿದ್ದಂತೆ ಕೆಲ ಅರ್ಹ ಫಲಾನುಭವಿಗಳ ಬಿಪಿಎಲ್ ಕಾರ್ಡ್ ರದ್ದಾಗಿ ಎಪಿಎಲ್ ಗೆ ವರ್ಗಾವಣೆ ಆದವು. ಇದು ಪ್ರತಿಪಕ್ಷಗಳ ಗಮನಕ್ಕೆ ಬಂದು, ಸರ್ಕಾರದ ವಿರುದ್ಧ ಮತ್ತೊಮ್ಮೆ ಟಿಕಾಸ್ತ್ರ ಪ್ರಯೋಗಿಸಲು ಸಹಕಾರಿಯಾಯಿತು.

ಸರ್ಕಾರ ಸುಸೂತ್ರವಾಗಿ ನಡೆಯುತ್ತಿದ್ದ ಸಂದರ್ಭದಲ್ಲಿ ಏಕಾಏಕಿ ಬಿಪಿಎಲ್ ಕಾರ್ಡ್ ಪರಿಷ್ಕರಣೆಗೆ ಮುಂದಾಗಿದ್ದು ಸರ್ಕಾರದ ಮೊದಲನೇ ತಪ್ಪು. ಬಿಪಿಎಲ್ ಕಾರ್ಡ್ ಹೊಂದಿರುವ ಅನರ್ಹರನ್ನ ಗುರುತಿಸುವುದೇ ಸರ್ಕಾರದ ಉದ್ದೇಶವಾಗಿದ್ದರೆ, ಮೊದಲು ಬಿಪಿಎಲ್ ಕಾರ್ಡ್ ಹೊಂದಿದ ಸರ್ಕಾರಿ ನೌಕರರನ್ನ ಗುರುತಿಸುವ ಕೆಲಸಕ್ಕೆ ಮುಂದಾಗಬೇಕಿತ್ತು.

ರಾಜ್ಯಾದ್ಯಂತ ಸುಮಾರು 4 ಸಾವಿರಕ್ಕೂ ಹೆಚ್ಚು ಸರ್ಕಾರಿ ನೌಕರರು ಬಿಪಿಎಲ್ ಕಾರ್ಡ್ ಹೊಂದಿದ್ದಾರೆ. ಇನ್ನು ತೆರಿಗೆ ಪಾವತಿಸಿಯು ಬಿಪಿಎಲ್ ಕಾರ್ಡ್ ಹೊಂದಿದವರ ಸಂಖ್ಯೆ ಲೆಕ್ಕಕ್ಕೆ ಸಿಕ್ಕಿಲ್ಲ. ಸರ್ಕಾರಕ್ಕೆ ನಿಜವಾಗಿಯೂ ಪರಿಷ್ಕರಣೆ ಮಾಡುವ ಇಚ್ಛೆ ಹೊಂದಿದ್ದರೆ, ತೆರಿಗೆ ಪಾವತಿದಾರರು ಮತ್ತು ಸರ್ಕಾರಿ ನೌಕರರ ಬಿಪಿಎಲ್ ಕಾರ್ಡ್ ರದ್ದುಗೊಳಿಸುವ ಕೆಲಸ ಮೊದಲೇ ಆರಂಭಿಸಬೇಕಿತ್ತು.

ಆದರೆ ಸರ್ಕಾರ ಯಾವುದೇ ಪೂರ್ವಾಪರಗಳನ್ನ ಯೋಚಿಸದೇ ಬಿಪಿಎಲ್ ಕಾರ್ಡ್ ಹೊಂದಿರುವ ಅನರ್ಹರನ್ನ ಗುರುತಿಸುವ ಜವಾಬ್ದಾರಿಯನ್ನ ಅಧಿಕಾರಿಗಳಿಗೆ ವಹಿಸಿತು. ಅಧಿಕಾರಿಗಳು ಮಾಡುವ ಸಣ್ಣ ಎಡವಟ್ಟು ಸರ್ಕಾರಕ್ಕೆ ಕೆಟ್ಟ ಹೆಸರು ಬರುತ್ತದೆ ಎನ್ನುವ ಅರಿವು ಸರ್ಕಾರಕ್ಕೆ ಇಲ್ಲದ್ದರಿಂದ ಇವತ್ತು ಸರ್ಕಾರ ಪ್ರತಿಪಕ್ಷಗಳ ಟೀಕೆಗೆ ಆಹಾರವಾಗಿದೆ.

ಯಾವಾಗ ಸಾರ್ವಜನಿಕ ವಲಯದಿಂದ ಮತ್ತು ಪ್ರತಿಪಕ್ಷಗಳ ಟೀಕೆ ಜೋರಾಯಿತೊ, ಸರ್ಕಾರ ಬಿಪಿಎಲ್ ಪರಿಷ್ಕರಣೆಯನ್ನು ಹಿಂದಕ್ಕೆ ಪಡೆದಿದೆ. ಈಗ ಕೇವಲ ಬಿಪಿಎಲ್ ಕಾರ್ಡ್ ಹೊಂದಿರುವ ಸರ್ಕಾರಿ ನೌಕರರ ಮತ್ತು ತೆರಿಗೆ ಪಾವತಿದಾರರನ್ನು ಮಾತ್ರ ಬಿಪಿಎಲ್ ನಿಂದ ಎಪಿಎಲ್ ಗೆ ವರ್ಗಾವಣೆ ಮಾಡುವ ಪ್ರಕ್ರಿಯೆ ಅಷ್ಟೇ ಆರಂಭಿಸಿದೆ.

ರಾಜ್ಯ ಸರ್ಕಾರ ಈ ಕೆಲಸವನ್ನು ಮೊದಲೇ ಆರಂಭಿಸಿದ್ದರೆ ಇವತ್ತು ಟೀಕೆಗಳನ್ನು ಎದುರಿಸುವ ಸಂದರ್ಭ ಬರುತ್ತಿರಲಿಲ್ಲ. ಅಲ್ಲದೆ ಇಂತಹ ಕೆಲಸಕ್ಕೆ ಎಲ್ಲಾ ಕಡೆಯಿಂದಲೂ ಪ್ರಶಂಸೆ ವ್ಯಕ್ತವಾಗುತ್ತಿತ್ತು. ಭವಿಷ್ಯದಲ್ಲಿ ಸರ್ಕಾರ ಸುಗಮವಾಗಿ ಆಡಳಿತ ನಡೆಸಬೇಕಾದರೆ, ಯಾವುದೇ ನಿರ್ಧಾರ ಕೈಗೊಳ್ಳುವ ಮುನ್ನ ಪೂರ್ವಾಪರಗಳನ್ನ ಯೋಚನೆ ಮಾಡುವುದು ಒಳಿತು.

---

ಕುಂದುಕೊರತೆಗಳ ಬಗ್ಗೆ ದೂರು ಸ್ವೀಕಾರ, ವಿಚಾರಣೆ ಸಭೆಯಲ್ಲಿ ಉಪ ಲೋಕಾಯುಕ್ತ ನ್ಯಾಯಮೂರ್ತಿ ಕೆ.ಎನ್.ಫಣೀಂದ್ರ

# ಸಮಸ್ಯೆಗಳ ಪರಿಹಾರಕ್ಕೆ ಮೊದಲ ಆದ್ಯತೆ

**■ವಿಜಯಸಾಕ್ಷಿ ಸುದ್ದಿ, ಧಾರವಾಡ**

ಸಾರ್ಜನಿಕರ ಸಮಸ್ಯೆಗಳ ಪರಿಹಾರಕ್ಕೆ ಕರ್ನಾಟಕ ಲೋಕಾಯುಕ್ತ ಮೊದಲ ಆದ್ಯತೆ ನೀಡುತ್ತದೆ ಎಂದು ಕರ್ನಾಟಕ ಉಪ ಲೋಕಾಯುಕ್ತ ನ್ಯಾಮೂರ್ತಿ ಕೆ.ಎಂ. ಫಣೀಂದ್ರ ಹೇಳಿದರು.

ಅವರು ಧಾರವಾಡ ಜಿಲ್ಲಾ ಪಂಚಾಯತ ಸಭಾಂಗಣದಲ್ಲಿ ಸಾರ್ವಜನಿಕರಿಂದ ಕುಂದುಕೊರತೆಗಳ ಬಗ್ಗೆ ದೂರು ಸ್ವೀಕಾರ, ವಿಚಾರಣೆ ಹಾಗೂ ವಿಲೇವಾರಿ ಸಭೆ ಉದ್ಘಾಟಿಸಿ ಮಾತನಾಡಿದರು.




ಜೀವಿಸುವ ಹಕ್ಕು ಮೂಲಭೂತ ಹಕ್ಕಾಗಿದೆ. ಅದು ಪ್ರತಿಯೊಬ್ಬರು ಗೌರವಯುತವಾಗಿ ಬದುಕುವ ಅವಕಾಶ ಮತ್ತು ಹಕ್ಕನ್ನು ಪ್ರತಿನಿಧಿಸುತ್ತದೆ. ಉತ್ತಮ ಪ್ರಕೃತಿ, ನೆಲ, ಜಲ, ಮಣ್ಣು, ಪರಿಸರ ಕಾಪಾಡುವುದು ಮತ್ತು ಪಡೆಯುವುದು ನಮ್ಮ ಹಕ್ಕು ಮತ್ತು ಕರ್ತವ್ಯವಾಗಿದೆ. ಭಾರತದ ಸಂವಿಧಾನ ನೀಡಿರುವ ಮೂಲಭೂತ ಹಕ್ಕುಗಳು, ಮೂಲಭೂತ ಕರ್ತವ್ಯಗಳು ಮತ್ತು ರಾಜ್ಯ ನೀತಿ ನಿರ್ದೇಶಕ ತತ್ವಗಳು ಪರಸ್ಪರ ಸಂಬಂಧ ಹೊಂದಿವೆ ಎಂದು ನ್ಯಾಯಮೂರ್ತಿ ಫಣೀಂದ್ರ ತಿಳಿಸಿದರು.

ಆಧುನಿಕ ಸರಕಾರಗಳು ಉತ್ತಮವಾದ ಜೀವನ ಮಾಡಲು ಸವಲತ್ತುಗಳನ್ನು ನೀಡುತ್ತದೆ. ಪ್ರತಿಯೊಂದು ವ್ಯವಸ್ಥೆಯಲ್ಲಿ ಕಾನೂನಿನ ರಚನೆ ಇದೆ. ಮನುಷ್ಯನು ಆಸ್ತಿ-ಪಾಸ್ತಿಗಳನ್ನು ಕಾಪಾಡಿಕೊಳ್ಳುವಂತಹ ಕಾನೂನು ವ್ಯವಸ್ಥೆ ನಮ್ಮಲ್ಲಿ ಇದೆ. ಆಸ್ತಿ ಅಂತಸ್ತುಗಳ ಮೇಲೆ ವಿಲ್ ಮಾಡುವ ಮೂಲಕ ಆಸ್ತಿ ಹಕ್ಕುಗಳನ್ನು ಚಲಾಯಿಸಬಹುದು ಎಂದು ಅವರು ಹೇಳಿದರು.

ಕರ್ನಾಟಕ ಲೋಕಾಯುಕ್ತವು ನಿಯಮಾನುಸಾರ ಕರ್ತವ್ಯ ನಿರ್ವಹಿಸುವ ಸರಕಾರಿ ನೌಕರರಿಗೆ ಸಹಾಯ ಮಾಡುತ್ತದೆ. ಸುಳ್ಳು ದೂರು, ಕರ್ತವ್ಯ ನಿರ್ವಹಣೆಗೆ ಅಡಚಣೆ ಉಂಟಾದರೆ ತನಿಖೆ ಮಾಡಿ, ಸೂಕ್ತ ರಕ್ಷಣೆ ನೀಡುತ್ತದೆ. ಕರ್ತವ್ಯ ಲೋಪ ಮಾಡುವ ಅಧಿಕಾರಿ, ನೌಕರರ ವಿರುದ್ಧ ಲೋಕಾಯುಕ್ತ ಕಾಯ್ದೆ ಪ್ರಕಾರ ಕಠಿಣ ಕ್ರಮಕ್ಕೆ ಶಿಫಾರಸ್ಸು ಮಾಡುತ್ತದೆ ಎಂದು ತಿಳಿಸಿದರು.

ಸಾರ್ವಜನಿಕ ಸೇವೆಯೇ ನಮ್ಮ ಗುರಿ. ವಿನಾಕಾರಣ ವಿಳಂಬ, ತಪ್ಪು ಮಾಹಿತಿ, ನಿಧಾನಗತಿ ಅನುಸರಿಸುವ ಮೂಲಕ ಕರ್ತವ್ಯ ಲೋಪ ಮಾಡಬೇಡಿ. ಎಚ್ಚರಿಕೆಯಿಂದ ಮತ್ತು ಸೇವಾ ಮನೋಭಾವನೆಯಿಂದ ಕರ್ತವ್ಯ ನಿರ್ವಹಿಸಿ.

ಪ್ರತಿಯೊಬ್ಬರಿಗೂ ಇರುವ ಹಕ್ಕುಗಳನ್ನು ಗೌರವಿಸಬೇಕು. ಮೂಲಭೂತ ಕರ್ತವ್ಯಗಳನ್ನು ಸಂರಕ್ಷಣೆ ಮಾಡಿಕೊಳ್ಳಬೇಕು. ನೀರು, ಗಾಳಿ ಸೇರಿದಂತೆ ಮೂಲಭೂತ ಸಂಪತ್ತುಗಳನ್ನು ಕಾಪಾಡಿಕೊಳ್ಳಬೇಕು ಎಂದು ತಿಳಿಸಿದರು.

ಯಾವುದೇ ರೀತಿಯ ಭ್ರಷ್ಟಾಚಾರ, ಪಕ್ಷಪಾತಗಳನ್ನು ಸರ್ಕಾರದ ಅಧೀನದಲ್ಲಿರುವ ಅಧಿಕಾರಿಗಳು ಮಾಡಬಾರದು. ಸಮಯಕ್ಕೆ ಸರಿಯಾಗಿ ಕಾರ್ಯ ನಿರ್ವಹಿಸುವುದು ಅಧಿಕಾರಿಗಳ ಜವಾಬ್ದಾರಿಯಾಗಿದೆ. ಕರ್ತವ್ಯ ಲೋಪವಾದರೆ ಸಾರ್ವಜನಿಕರ ಹಕ್ಕು ಉಲ್ಲಂಘನೆ ಆಗುತ್ತದೆ. ಸಂಬಂಧಿಸಿದ ಅಧಿಕಾರಿಗಳು, ಸರಿಯಾದ ರೀತಿಯಲ್ಲಿ ಕಾರ್ಯ ನಿರ್ವಹಿಸಿ ಸರಿಪಡಿಸಬೇಕು ಎಂದು ತಿಳಿಸಿದರು.

ಲೋಕಾಯುಕ್ತ ಕಚೇರಿಯ ಬಗ್ಗೆ ಸಾರ್ವಜನಿಕರಿಗೆ ತಿಳಿಸಬೇಕು. ಲೋಕಾಯುಕ್ತದ 7, 8 ಮತ್ತು 9 ನೇ ಕಲಂಗಳನ್ನು ಪ್ರತಿಯೊಬ್ಬರೂ ತಿಳಿದುಕೊಳ್ಳಬೇಕು. ಹೈಕೋರ್ಟ್‌ಗಳಿಗೆ ಇರುವ ಅಧಿಕಾರವನ್ನು ಕಲಂ 17ರಡಿಯಲ್ಲಿ ಲೋಕಾಯುಕ್ತವು ಕೂಡ ಹೊಂದಿದೆ ಎಂದು ನ್ಯಾಯಮೂರ್ತಿಗಳು ಹೇಳಿದರು.

ವೇದಿಕೆಯಲ್ಲಿ ಮಹಾನಗರ ಪೊಲೀಸ್ ಆಯುಕ್ತ ಎನ್.ಶಶಿಕುಮಾರ, ಜಿ.ಪಂ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಸ್ವರೂಪ ಟಿ.ಕೆ., ಜಿಲ್ಲಾ ಪೊಲೀಸ್ ಅಧೀಕ್ಷಕ ಡಾ.ಗೋಪಾಲ ಬ್ಯಾಕೋಡ, ಉಪ ಪೊಲೀಸ್ ಆಯುಕ್ತರಾದ ಸಿ.ಆರ್. ರವೀಶ, ಮಾನಿಂಗ ನಂದಗಾವಿ, ಹುಬ್ಬಳ್ಳಿ ಧಾರವಾಡ ಮಹಾನಗರಪಾಲಿಕೆ ಆಯುಕ್ತ ಡಾ.ಈಶ್ವರ ಉಳ್ಳಾಗಡ್ಡಿ, ಕರ್ನಾಟಕ ಲೋಕಾಯುಕ್ತ ಬೆಂಗಳೂರು ಕಚೇರಿಯಲ್ಲಿನ ವಿವಾರಣಾ ವಿಭಾಗದ ಅಪರ ನಿಬಂಧಕರಾದ ಪಿ.ಶ್ರೀನಿವಾಸ, ನರಸಿಂಹಸಾ ಎಂ.ವಿ., ಹಿರಿಯ ಸಿವಿಲ್ ನ್ಯಾಯಾಧೀಶ ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಪರಶುರಾಮ ದೊಡ್ಡಮನಿ, ಸಿವಿಲ್ ನ್ಯಾಯಾಧೀಶ ಕಿರಣ ಪಿ.ಎಂ. ಪಾಟೀಲ್, ಧಾರವಾಡ ಜಿಲ್ಲಾ ಲೋಕಾಯುಕ್ತ ಪೊಲೀಸ್ ಅಧೀಕ್ಷಕ ಹನುಮಂತರಾಯ ಸೇರಿದಂತೆ ವಿವಿಧ ಅಧಿಕಾರಿಗಳು ಉಪಸ್ಥಿತರಿದ್ದರು.


ಸಭೆಯ ಅಧ್ಯಕ್ಷತೆ ವಹಿಸಿದ್ದ ಜಿಲ್ಲಾಧಿಕಾರಿ ದಿವ್ಯ ಪ್ರಭು ಮಾತನಾಡಿ, ಸರಕಾರಿ ಅಧಿಕಾರಿಗಳು ಕಾಯಕವೇ ಕೈಲಾಸ ಎಂಬುದನ್ನು ಅರಿತು ಕೆಲಸ ಮಾಡಿದರೆ ಯಾವುದೇ ದೂರುಗಳು ಬರುವುದಿಲ್ಲ. ನೈತಿಕ ಮೌಲ್ಯಗಳನ್ನು ಅರಿತು ಕೆಲಸ ಮಾಡಬೇಕು. ಮಾಡಿರುವ ತಪ್ಪುಗಳನ್ನು ಮತ್ತೆ ಮತ್ತೆ ಮಾಡಬಾರದು. ಅವುಗಳನ್ನು ಅರಿತು ಸರಿಪಡಿಸಿಕೊಳ್ಳಬೇಕು. ಸರ್ಕಾರಿ ಅಧಿಕಾರಿಗಳು ಕಾನೂನಾತ್ಮಕ ಯಾವೆಲ್ಲ ಜವಾಬ್ದಾರಿಗಳಿವೆ ಎಂಬುದನ್ನು ತಾವು ತಿಳಿಯಬೇಕು. ಇಲ್ಲಿಯವರೆಗೆ ಆಗಿರುವ ಲೋಪಗಳನ್ನು ಬಗೆಹರಿಸುವಂತಹ ಕೆಲಸ ಮಾಡಬೇಕು ಎಂದು ತಿಳಿಸಿದರು.

---

# ಧರ್ಮಾಚರಣೆಯಿಂದ ಸುಖ-ಶಾಂತಿ ಪ್ರಾಪ್ತಿ

**■ವಿಜಯಸಾಕ್ಷಿ ಸುದ್ದಿ, ಬಸವಾಪಟ್ಟಣ**

ಮನುಷ್ಯ ಯಾವಾಗಲೂ ಸುಖಾಪೇಕ್ಷಿ. ಸುಖ ಶಾಂತಿ ಜೀವನ ಪ್ರಾಪ್ತವಾಗಲು ಮೊದಲು ಧರ್ಮಾಚರಣೆಯನ್ನು ಮಾಡಬೇಕಾಗುತ್ತದೆ ಎಂದು ಬಾಳೆಹೊನ್ನೂರು ಶ್ರೀ ರಂಭಾಪುರಿ ಡಾ. ವೀರಸೋಮೇಶ್ವರ ಜಗದ್ಗುರುಗಳು ತಮ್ಮ ಅಭಿಪ್ರಾಯಪಟ್ಟರು.




ಅವರು ಗುರುವಾರ ತೊಟ್ಟಿಮನೆ ವಂಶಸ್ಥರು ನಿರ್ಮಿಸಿದ ಶ್ರೀ ಗಂಗಾಧರೇಶ್ವರಸ್ವಾಮಿ ನೂತನ ದೇವಾಲಯ ಉದ್ಘಾಟಿಸಿ ಪ್ರಾಣಪ್ರತಿಷ್ಠಾಪನೆ ನೆರವೇರಿಸಿ, ನಂತರ ಜರುಗಿದ ಧರ್ಮ ಜಾಗೃತಿ ಸಮಾರಂಭದ ಸಾನ್ನಿಧ್ಯ ವಹಿಸಿ ಆಶೀರ್ವಚನ ನೀಡುತ್ತಿದ್ದರು.

ಬಾಳ ಬದುಕಿಗೆ ಧರ್ಮದ ಬೆಳಕು ಬೇಕು. ಬೆಳಕಿಲ್ಲದ ಬಾಳಿಗೆ ಬೆಲೆ ನೆಲೆಯಿಲ್ಲ. ಬೆಳಕಿದ್ದರೆ ಯಾವುದರ ಭಯವೂ ಮನುಷ್ಯನಿಗೆ ಇರುವುದಿಲ್ಲ. ಇಹ ಪರ ಜೀವನದ ಶ್ರೇಯಸ್ಸಿಗೆ ಧರ್ಮವೇ ಮೂಲವೆಂದು ಶ್ರೀ ಜಗದ್ಗುರು ರೇಣುಕಾಚಾರ್ಯರು ನಿರೂಪಿಸಿದ್ದಾರೆ. ಅಹಿಂಸಾದಿ ಧ್ಯಾನ ಪರ್ಯಂತರವಾದ ದಶಧರ್ಮ ಸೂತ್ರಗಳು ಬದುಕಿ ಬಾಳುವ ಜನಾಂಗಕ್ಕೆ ದಾರಿ ದೀಪ. ಅರಿವಿನ ದಾರಿಯಲ್ಲಿ ಮುನ್ನಡೆಸುವುದೇ ಗುರುವಿನ ಪರಮ ಧರ್ಮವಾಗಿದೆ. ಒಂದು ನಿಶ್ಚಿತ ಗುರಿ ಮತ್ತು ಒಬ್ಬ ಶ್ರೇಷ್ಠ ಗುರುವಿನ ಸಹಯೋಗದಿಂದ ಬದುಕು ಉಜ್ವಲಗೊಳ್ಳುತ್ತದೆ. ಸುಖ ಬಯಸುವ ಮನುಷ್ಯ ಧರ್ಮಾಚರಣೆ ಮಾಡಲು ಹಿಂಜರಿಯುತ್ತಾನೆ. ದುಃಖವನ್ನು ಯಾರೂ ಬಯಸುವುದಿಲ್ಲ. ಆದರೆ ಧರ್ಮ ಪರಿಪಾಲನೆ ಮಾಡಲಾರ. ಸತ್ಯ ಶುದ್ಧ ಸೈದ್ಧಾಂತಿಕ ತಳಹದಿಯ ಮೇಲೆ ಮಾನವ ಜೀವನ ರೂಪಿತಗೊಳ್ಳಬೇಕಾಗಿದೆ ಎಂದರು.

ಕರ್ಪೂರವಳ್ಳಿ ಚಂದ್ರಶೇಖರ ಶಿವಾಚಾರ್ಯರು ಸಮಾರಂಭದಲ್ಲಿ ಪಾಲ್ಗೊಂಡಿದ್ದರು. ಬಿ.ಸಿ. ನಂಜುಂಡಶೆಟ್ಟಿ, ಬಿ.ಎಸ್. ಮಹದೇವಪ್ಪ, ಬಿ.ಜಿ. ಕರುಣೇಶ್, ಬಿ.ಜಿ. ಶ್ರೀಕಂಠಶೆಟ್ಟಿ, ಬಿ.ಜಿ. ಷಡಕ್ಷರಶೆಟ್ಟರ ಹಾಗೂ ಬಿ.ಜಿ. ದೊಡ್ಡೇಶ ಬಾಬು ಮೊದಲಾದವರು ಉಪಸ್ಥಿತರಿದ್ದು ಶ್ರೀ ರಂಭಾಪುರಿ ಜಗದ್ಗುರುಗಳ ಆಶೀರ್ವಾದ ಪಡೆದರು. ತೊಟ್ಟಿಮನೆ ಮಹದೇವಪ್ಪನವರು ಸರ್ವರನ್ನು ಸ್ವಾಗತಿಸಿ ಪ್ರಾಸ್ತಾವಿಕವಾಗಿ ಮಾತನಾಡಿದರು.

---

# ನವೀಕೃತಗೊಂಡ ಮಹೇಂದ್ರಕರ್ ವೃತ್ತಕ್ಕೆ ಎಸ್ಪಿ ಭೇಟಿ



**■ವಿಜಯಸಾಕ್ಷಿ ಸುದ್ದಿ, ಗದಗ**

ನಗರದ ಮಹೇಂದ್ರಕರ್ ವೃತ್ತ ನವೀಕೃತಗೊಂಡಿದ್ದು, ಈ ವೃತ್ತ ಸುಸಜ್ಜಿತಗೊಳಿಸುವಲ್ಲಿ ವಿಶೇಷ ಆಸಕ್ತಿ ಮತ್ತು ಕಾಳಜಿವಹಿಸಿದ್ದ ಜಿಲ್ಲಾ ಪೊಲೀಸ್ ಅಧೀಕ್ಷಕ ಬಿ.ಎಸ್. ನೇಮಗೌಡ ಗುರುವಾರ ಸಂಜೆ ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿ ಸಂತಸ ವ್ಯಕ್ತಪಡಿಸಿದರು.

ಈ ಹಿಂದೆ ನಗರದಲ್ಲಿ ಬಂದೋಬಸ್ತ್ ಹಾಗೂ ಸಂಚಾರ ವ್ಯವಸ್ಥೆ ಸುಧಾರಣೆ ಕುರಿತು ಪರಿಶೀಲನೆಗಾಗಿ ನಗರದಲ್ಲಿ ಸಂಚಾರ ನಡೆಸಿದ ಸಂದರ್ಭದಲ್ಲಿ ಈ ಕುರಿತು ಸ್ಥಳೀಯರು ಗಮನ ಸೆಳೆದಿದ್ದರು. ಆಗ ವೃತ್ತ ನವೀಕರಣಕ್ಕೆ ಆಸಕ್ತಿ ತೋರಿದ್ದ ಎಸ್.ಪಿ. ಬಿ ಎಸ್ ನೇಮಗೌಡ ಅವರ ವಿಶೇಷ ಕಾಳಜಿಯಿಂದಾಗಿ ಮಹೇಂದ್ರಕರ್ ವೃತ್ತ ಈಗ ನವೀಕೃತಗೊಂಡು ನೀರಿನ ಕಾರಂಜಿ ಹಾಗೂ ಬಣ್ಣ ಬಣ್ಣದ ವಿದ್ಯುತ್ ದ್ವೀಪಗಳಿಂದ ಅಲಂಕೃತಗೊಂಡು ಜನರ ಗಮನ ಸೆಳೆಯುತ್ತಿದೆ.

---

# ಕಪ್ಪತಗಿರಿ ವೇದಿಕೆಯ ಧಾರವಾಡ ಘಟಕ ಉದ್ಘಾಟನೆ ನಾಳೆ

**■ವಿಜಯಸಾಕ್ಷಿ ಸುದ್ದಿ, ಗದಗ**

ಕಪ್ಪತ್ತಗಿರಿ ಸಾಹಿತ್ಯ ಮತ್ತು ಸಾಂಸ್ಕೃತಿಕ ಕಲಾ ವೇದಿಕೆಯ ಧಾರವಾಡ ಜಿಲ್ಲಾ ಘಟಕ ಉದ್ಘಾಟನೆ, ಕವಿಗೋಷ್ಠಿ, ಮತ್ತು ಪುಸ್ತಕ ಬಿಡುಗಡೆ ಕಾರ್ಯಕ್ರಮ ನ.24ರಂದು ಜರುಗಲಿದೆ. ಕಾರ್ಯಕ್ರಮದ ದಿವ್ಯ ಸಾನ್ನಿಧ್ಯವನ್ನು ಶ್ರೀ. ನಿ.ಪ್ರ. ಅಭಿನವ ರೇವಣಸಿದ್ದೇಶ್ವರ ಸ್ವಾಮಿಗಳು, ಸಂಸ್ಥಾನ ವಿರಕ್ತಿಮಠ ರಾಯನಾಳ ಸ್ವಾಮಿಗಳು ವಹಿಸಲಿದ್ದಾರೆ.

ಉದ್ಘಾಟನೆಯನ್ನು ಕಪ್ಪತ್ತಗಿರಿ ಫೌಂಡೇಶನ್ ಸಂಸ್ಥಾಪಕ ಅಧ್ಯಕ್ಷರಾದ ಚಂದ್ರಕಲಾ ಎಂ. ಇಟಗಿಮಠ ನೆರವೇರಿಸಲಿದ್ದಾರೆ. ಧಾರವಾಡ ಜಿಲ್ಲಾಧ್ಯಕ್ಷರಾದ ನಾಗರತ್ನ ಹೊಸಮನಿ ಶಿವಲೀಲಾ ಧನ್ನಾ ಪಾಲ್ಗೊಳ್ಳುವರು. ಕವಿಗೋಷ್ಠಿ ಅಧ್ಯಕ್ಷತೆಯನ್ನು ನಿರ್ಮಲಾ ಶೆಟ್ಟರ್, ಪುಸ್ತಕ ಬಿಡುಗಡೆಯನ್ನು ಡಾ. ಐ.ಬಿ. ಹಳಮನಿ ಮಾಡಲಿದ್ದಾರೆ. ಪುಸ್ತಕ ಪರಿಚಯವನ್ನು ಎಫ್.ಐ. ಸೊರಟೂರ ಮಾಡಿಕೊಡಲಿದ್ದಾರೆ.

ಮುಖ್ಯ ಅತಿಥಿಗಳಾಗಿ ವೇದಮೂರ್ತಿ ಸಂಗಯ್ಯ ಹಿರೇಮಠ, ಮಂಜುನಾಥ್ ಗಾಣಿಗೇರ, ಎಂ.ಎಸ್. ಶಿವಳ್ಳಿಮಠ, ಅಥಿತಿಗಳಾಗಿ ಭೀಮಪ್ಪ ಮೊರಬದ, ಶಿವಪ್ಪ ಬಿಡ್ನಾಳ, ಭೀಮಣ್ಣ ವಾಲೀಕಾರ, ಕಲ್ಲಪ್ಪ ಮೊರಬದ, ತಾಜುಸಾಬ ಬರದೂರ, ಉಮೇಶಗೌಡ ಪಾಟೀಲ, ಪಕ್ಕಣ್ಣ ಗಾಣಿಗೇರ, ವಾಸುದೇವ ಹೂದೋಜಿ, ಸುರೇಶ ಶೀಲಾರ ಪಾಲ್ಗೊಳ್ಳುವರು ಎಂದು ವೇದಿಕೆ ಸಂಸ್ಥಾಪಕ ಅಧ್ಯಕ್ಷರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

---

# ಕ್ಷತ್ರಿಯ ಸಮಾಜದ ಮುಂಜವಿ ಕಾರ್ಯಕ್ರಮ

**■ವಿಜಯಸಾಕ್ಷಿ ಸುದ್ದಿ, ಗದಗ**

ನಗರದ ಖಾನತೋಟ ಗಂಗಾಪುರ ಪೇಟೆ ಓಣೆಯಲ್ಲಿ 3ನೇ ವರ್ಷದ ಉಪನಯನ ಕಾರ್ಯಕ್ರಮ ಹಾಗೂ ಮದುವೆ ವಿಜೃಂಭಣೆಯಿಂದ ನೆರವೇರಿತು. ಕ್ರಾಂತಿ ಸೇನಾ ಗದಗ ಶ್ರೀ ರಾಜರಾಜೇಶ್ವರಿ ಮಹಿಳಾ ಮಂಡಲ, ಶ್ರೀ ಜಗದಂಬಾ ಸೇವಾ ಸಮಿತಿಯ ಉಪನಯನ ಸಮಿತಿ ನೇತೃತ್ವದಲ್ಲಿ 36 ಮುಂಜವಿ ಕಾರ್ಯಕ್ರಮ ಹಾಗೂ ಒಂದು ಮದುವೆ ಕಾರ್ಯಕ್ರಮ ನೆರವೇರಿತು.



ಈ ಸಂದರ್ಭದಲ್ಲಿ ಉಪನಯನ ಸಮಿತಿಯ ಗೌರವಾಧ್ಯಕ್ಷ ಪರಶುರಾಮಸಾ ಎಸ್.ಹಬೀಬ, ಅಧ್ಯಕ್ಷ ಶಂಕರಸಾ ಎಸ್.ಬದಿ, ಕ್ರಾಂತಿ ಸೇನಾ ಗದಗ ಜಿಲ್ಲಾಧ್ಯಕ್ಷ, ಉಪನಯನ ಸಂಸ್ಥಾಪಕರು ಬಾಬು ಬಾಕಳೆ, ಉಪಾಧ್ಯಕ್ಷರಾದ ಗುರುನಾಥಸಾ ಎ.ಬಾಕಳೆ, ನಾರಾಯಣ ಆರ್. ನಿರಂಜನ, ಶ್ರೀದೇವಿ ಸಿ.ಕಬಾಡಿ, ಗೌರವ ಕಾರ್ಯದರ್ಶಿ ಉಮೇಶ ಎನ್.ಹಬೀಬ, ಕಾರ್ಯದರ್ಶಿ ಮಂಜುನಾಥ ಕೆಂದೊಳ್ಳಿ, ಸಹ-ಕಾರ್ಯದರ್ಶಿ ಕಸ್ತೂರಿಬಾಯಿ ಎನ್.ಕಬಾಡಿ, ಅಕ್ಷತಾ ಎನ್.ಪವಾರ, ಖಜಾಂಚಿ ನಾರಾಯಣಸಾ ಡಿ.ಖಟವಟೆ, ಉಪ ಖಜಾಂಚಿ ಶಂಕರಸಾ ಕಲಬುರ್ಗಿ, ಸ್ವಾಗತ ಸಮಿತಿಯ ಗುರು ಕೆ.ಭಾಂಡಗೆ, ಪ್ರವೀಣ ಎ.ಹಬೀಬ ಉಪಸ್ಥಿತರಿದ್ದರು.

---

# ಅದಾನಿಯ ಬಂಧನ ಏಕಿಲ್ಲ, ರಕ್ಷಿಸುತ್ತಿರುವವರು ಯಾರು? ಸಿಎಂ ಸಿದ್ದರಾಮಯ್ಯ

**■ವಿಜಯಸಾಕ್ಷಿ ಸುದ್ದಿ, ಬೆಂಗಳೂರು**

ಅರೆಸ್ಟ್ ವಾರೆಂಟ್ ಬಂದಿದ್ದರೂ ಕೇಂದ್ರ ತನಿಖಾ ಸಂಸ್ಥೆಗಳು ಅದಾನಿಯನ್ನು ಏಕೆ ಬಂಧಿಸುತ್ತಿಲ್ಲ? ಅವರನ್ನು ರಕ್ಷಿಸುತ್ತಿರುವವರು ಯಾರು? ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಪ್ರಶ್ನಿಸಿದರು.



ಮೈಸೂರಿನಲ್ಲಿ ಇಂದು (ನ.22) ಮಾಧ್ಯಮಗಳೊಂದಿಗೆ ಮಾತನಾಡಿದ ಅವರು, ತಕ್ಷಣ ಅದಾನಿಯನ್ನು ಬಂಧಿಸಬೇಕು, ಇಲ್ಲದಿದ್ದರೆ ಅವರು ತಪ್ಪಿಸಿಕೊಳ್ಳುವ ಸಾಧ್ಯತೆಯೂ ಇದೆ ಎಂದರು.

ಅದಾನಿಯಿಂದ ಅಂತಾರಾಷ್ಟ್ರೀಯ ಮಟ್ಟದಲ್ಲಿ ಭಾರತದ ಘನತೆ ಪದೇ ಪದೇ ಹರಾಜಾಗುತ್ತಿದೆ. ಅದಾನಿಗೆ ರಕ್ಷಣೆ ಕೊಡುತ್ತಿರುವವರು ಯಾರು ಎನ್ನುವುದು ದೇಶಕ್ಕೇ ಗೊತ್ತಿದೆ. ಆದರೆ ಮಾಧ್ಯಮಗಳು ಈ ಬಗ್ಗೆ ಮಾತನಾಡುತ್ತಿಲ್ಲ. ಈ ಸತ್ಯವನ್ನು ಮಾಧ್ಯಮಗಳು ದೇಶದ ಜನರಿಗೆ ತೋರಿಸಬೇಕು ಎಂದು ಹೇಳಿದರು.

ರೈತರಿಗೆ ರಿಯಾಯಿತಿ ಬಡ್ಡಿ ದರದಲ್ಲಿ ಕೊಡುವ ಸಾಲದ ಮೊತ್ತವನ್ನು ನಬಾರ್ಡ್ ಈ ಬಾರಿ ರಾಜ್ಯಕ್ಕೆ ಶೇ.58 ಕಡಿತಗೊಳಿಸಿದೆ. ಇದು ರಾಜ್ಯದ ರೈತರಿಗೆ ಮಾಡಿದ ಪರಮ ಅನ್ಯಾಯ. ಆದರೆ ಕೇಂದ್ರ ಸಚಿವರಾದ ಪ್ರಲ್ಹಾದ್ ಜೋಶಿಯವರು ಈ ಅನ್ಯಾಯದ ಸಮರ್ಥನೆಗೆ ಇಳಿದಿರುವುದು ನಾಚಿಕೆಗೇಡು. ಪ್ರಹ್ಲಾದ್ ಜೋಶಿಯವರ ಹೇಳಿಕೆಗೆ ಸೋ ಕಾಲ್ಡ್ ಮಣ್ಣಿನ ಮಗ, ರೈತರ ಮಗ ಅಂದುಕೊಂಡಿರುವ ಕುಮಾರಸ್ವಾಮಿಯವರು ಉಸಿರೇ ಬಿಡ್ತಿಲ್ಲವಲ್ಲ ಏಕೆ? ಎಂದು ಪ್ರಶ್ನಿಸಿದರು.

ವರ್ಷದಿಂದ ವರ್ಷಕ್ಕೆ ನಬಾರ್ಡ್ ನಿಂದ ರಾಜ್ಯದ ರೈತರಿಗೆ ಕೊಡುವ ಸಾಲದ ಪ್ರಮಾಣ ಹೆಚ್ಚಾಗಬೇಕು. ಆದರೆ ಈ ಬಾರಿ ಕಡಿತಗೊಳಿಸಿದೆ. ಶೇ 4.5 ಬಡ್ಡಿದರದಲ್ಲಿ ನಬಾರ್ಡ್ ರಾಜ್ಯದ ರೈತರಿಗೆ ಸಾಲ ಕೊಡುತ್ತದೆ. ರೈತರ ಪರವಾಗಿ ಈ ಬಡ್ಡಿಯನ್ನು ರಾಜ್ಯ ಸರ್ಕಾರವೇ ಭರಿಸುತ್ತದೆ. ಆದರೆ ಈಗ ನಬಾರ್ಡ್ ಸಾಲದ ಪ್ರಮಾಣ ಕಡಿತಗೊಳಿಸಿರುವುದರಿಂದ ನಾವು ವಾಣಿಜ್ಯ ಬ್ಯಾಂಕ್ ಗಳ ಬಳಿ ಸಾಲಕ್ಕೆ ಹೋಗಿ ಶೇ10 ರಷ್ಟು ಬಡ್ಡಿ ಕಟ್ಟಬೇಕು. ಇದು ರಾಜ್ಯಕ್ಕೆ ಆಗುವ ನಷ್ಟ. ಇಷ್ಟು ದೊಡ್ಡ ಪ್ರಮಾಣದ ಅನ್ಯಾಯವನ್ನು ಜೋಶಿ ಸಮರ್ಥಿಸಿಕೊಂಡಿದ್ದಾರೆ.

---

# ಅಮೆರಿಕ ಆರೋಪಪಟ್ಟಿ ಅಧ್ಯಯನ ಬಳಿಕ ಅದಾನಿ ಲಂಚ ಪ್ರಕರಣದ ಮೇಲೆ ಕ್ರಮ

**■ವಿಜಯಸಾಕ್ಷಿ ಸುದ್ದಿ, ಆಂಧ್ರಪ್ರದೇಶ**

ಹಿಂದಿನ ವೈಎಸ್‌ಆರ್‌ಸಿಪಿ ಸರ್ಕಾರ ಮತ್ತು ಅದಾನಿ ಗ್ರೂಪ್ ಒಳಗೊಂಡಿರುವ ಆಪಾದಿತ ಲಂಚ ಹಗರಣಕ್ಕೆ ಸಂಬಂಧಿಸಿದಂತೆ ಅಮೆರಿಕಾ ಸಲ್ಲಿಸಿರುವ ಚಾರ್ಜ್‌ಶೀಟ್ ವರದಿಗಳ ಬಳಿಕ ಕ್ರಮ ಕೈಗೊಳ್ಳಲಾಗುವುದು ಎಂದು ಆಂಧ್ರಪ್ರದೇಶ ಮುಖ್ಯಮಂತ್ರಿ ಎನ್ ಚಂದ್ರಬಾಬು ನಾಯ್ಡು ಶುಕ್ರವಾರ ಹೇಳಿದ್ದಾರೆ.



ಉದ್ಯಮಿ ಮತ್ತು ಅದಾನಿ ಗ್ರೂಪ್ ಅಧ್ಯಕ್ಷ ಗೌತಮ್ ಅದಾನಿ ಅವರು ಸೌರ ವಿದ್ಯುತ್ ಒಪ್ಪಂದಗಳಿಗೆ ಅನುಕೂಲಕರವಾದ ಷರತ್ತುಗಳಿಗೆ ಬದಲಾಗಿ ಭಾರತೀಯ ಅಧಿಕಾರಿಗಳಿಗೆ $250 ಮಿಲಿಯನ್ ಲಂಚ ನೀಡುವ ವರ್ಷಗಳ ಯೋಜನೆಯಲ್ಲಿ ಅವರ ಪಾತ್ರದ ಬಗ್ಗೆ ಯುಎಸ್ ನ್ಯಾಯಾಂಗ ಇಲಾಖೆಯು ಆರೋಪ ಹೊರಿಸಿದೆ.

ಹಿಂದಿನ ವೈಎಸ್‌ಆರ್‌ಸಿಪಿ ಆಡಳಿತವು ಅದಾನಿ ಗ್ರೂಪ್‌ನಿಂದ ಸರ್ಕಾರಿ ಅಧಿಕಾರಿಗಳು ಲಂಚ ಪಡೆದಿದ್ದಾರೆ ಎಂಬ ಆರೋಪದ ಹಗರಣದಲ್ಲಿ ಸಿಲುಕಿಕೊಂಡಿದೆ. ವಿಧಾನಸಭೆಯನ್ನು ಉದ್ದೇಶಿಸಿ ಮಾತನಾಡಿದ ಮುಖ್ಯಮಂತ್ರಿ, ತಮ್ಮ ಸರ್ಕಾರವು ಆ ಆರೋಪಗಳನ್ನು ಅಧ್ಯಯನ ಮಾಡಿ ಅವುಗಳ ಮೇಲೆ ಕ್ರಮ ಕೈಗೊಳ್ಳುತ್ತದೆ ಎಂದು ಹೇಳಿದರು.

"ಅಲ್ಲಿ (ಯುಎಸ್) ಸಲ್ಲಿಸಲಾದ ಎಲ್ಲ ಆರೋಪಪಟ್ಟಿ ವರದಿಗಳು ನನ್ನ ಬಳಿ ಇವೆ. ಅದು ಸಾರ್ವಜನಿಕ ಡೊಮೇನ್‌ನಲ್ಲಿದೆ. ಅದನ್ನು ಅಧ್ಯಯನ ಮಾಡುತ್ತೇನೆ (ಆರೋಪಗಳು ಮತ್ತು ದೋಷಾರೋಪಣೆ) ಅದರ ಬಗ್ಗೆ ಕ್ರಮವಹಿಸಿ ನಿಮಗೆ ತಿಳಿಸುತ್ತೇನೆ" ಎಂದು ನಾಯ್ಡು ಹೇಳಿದರು.

ವೈಎಸ್‌ಆರ್‌ಸಿಪಿಯು ತನ್ನ ನೇತೃತ್ವದ ಸರ್ಕಾರದ ವಿರುದ್ಧ ಮಾಡಿದ ಆರೋಪಗಳನ್ನು ಗುರುವಾರ ತಳ್ಳಿಹಾಕಿದೆ. ಅದಾನಿ ಗುಂಪಿನೊಂದಿಗೆ ಯಾವುದೇ ನೇರ ಒಪ್ಪಂದವಿಲ್ಲ ಎಂದು ಹೇಳಿದೆ.

ವೈಎಸ್‌ಆರ್‌ಸಿಪಿ ಆಡಳಿತ ಮತ್ತು ಅದಾನಿ ಗುಂಪನ್ನು ಒಳಗೊಂಡಿರುವ ಆರೋಪಗಳು ದಕ್ಷಿಣ ರಾಜ್ಯದ ಪ್ರತಿಷ್ಠೆ ಮತ್ತು ಬ್ರಾಂಡ್ ಇಮೇಜ್‌ಗೆ ಧಕ್ಕೆ ತಂದಿವೆ ಎಂದು ಹೇಳಿದ ನಾಯ್ಡು, "ಇದು ಅತ್ಯಂತ ದುಃಖದ ಬೆಳವಣಿಗೆ" ಎಂದು ಬಣ್ಣಿಸಿದರು.

# ಕನಕದಾಸ ಜಯಂತಿ, ಸಾಧಕರಿಗೆ ಸನ್ಮಾನ ನಾಳೆ

**■ ವಿಜಯಸಾಕ್ಷಿ ಸುದ್ದಿ, ಗದಗ**

ಕನಕಾಮೃತ ವಿವಿಧೋದ್ದೇಶ ಸೇವಾ ಸಂಸ್ಥೆ ಗದಗ ಹಾಗೂ ಕರಿಯಮ್ಮದೇವಿ ಮಹಿಳಾ ಮಂಡಳ ಇವುಗಳ ಸಂಯುಕ್ತ ಆಶ್ರಯದಲ್ಲಿ ಕನಕದಾಸರ 537ನೇ ಜಯಂತಿ ಉತ್ಸವ ಹಾಗೂ ಸನ್ಮಾನ ಸಮಾರಂಭ ನ.24ರಂದು ಬೆಳಿಗ್ಗೆ 10.30ಕ್ಕೆ ವಿವೇಕಾನಂದ ನಗರದ ಶ್ರೀ ಸ್ವಾಮಿ ವಿವೇಕಾನಂದ ಸಾಂಸ್ಕೃತಿಕ ಭವನದಲ್ಲಿ ಜರುಗಲಿದೆ.

ಕಾರ್ಯಕ್ರಮದ ಸಾನ್ನಿಧ್ಯವನ್ನು ಧಾರವಾಡದ ಜ. ಶ್ರೀ ರೇವಣಸಿದ್ದೇಶ್ವರ ಮಹಾಮಠ ಕನಕ ಭವನ ಮನಸೂರದ ಪೂಜ್ಯಶ್ರೀ ಬಸವರಾಜ ದೇವರು ಮಹಾಸ್ವಾಮಿಗಳು ವಹಿಸುವರು. ಕ.ವಿ. ಸೇವಾ ಸಂಸ್ಥೆಯ ಅಧ್ಯಕ್ಷರಾದ ಪ್ರೊ. ಎಂ.ಎನ್. ಕಾಮನಹಳ್ಳಿ ಅಧ್ಯಕ್ಷತೆ ವಹಿಸುವರು. ಧಾರವಾಡ ಕವಿವಿಯ ಸಹಾಯಕ ಪ್ರಾಧ್ಯಾಪಕ ಡಾ. ನಿಂಗಪ್ಪ ಮುದೇನೂರ ಉಪನ್ಯಾಸ ನೀಡುವರು. ಅತಿಥಿಗಳಾಗಿ ಕುರುಬರ ಸಂಘದ ಜಿಲ್ಲಾಧ್ಯಕ್ಷ ಫಕೀರಪ್ಪ ಹೆಬಸೂರ, ಜಿ.ಪಂ ಮಾಜಿ ಅಧ್ಯಕ್ಷ ವಾಸಣ್ಣ ಕುರುಡಗಿ, ಬಿಜೆಪಿ ಓಬಿಸಿ ಮೋರ್ಚಾದ ಮಾಜಿ ರಾಜ್ಯ ಕಾರ್ಯದರ್ಶಿ ರವಿ ದಂಡಿನ, ಹಾಲುಮತ ಮಹಾಸಭಾ ರಾಜ್ಯಾಧ್ಯಕ್ಷ ರುದ್ರಣ್ಣ ಗುಳಗುಳಿ, ಉದ್ಯಮಿ ಪ್ರಕಾಶ ಕರಿ, ನಗರಸಭೆ ಸದಸ್ಯರಾದ ಶ್ವೇತಾ ಬೆನಕನವಾರಿ, ವಿಜಯಲಕ್ಷ್ಮಿ ದಿಂಡೂರ, ಮುತ್ತಣ್ಣ ಮುಶಿಗೇರಿ ಆಗಮಿಸುವರು.

ಕ.ವಿ. ಸೇವಾ ಸಂಸ್ಥೆಯ ಗೌರವಾಧ್ಯಕ್ಷ ಬಿ.ವೈ. ಮಕ್ಕಣ್ಣವರ, ಉಪಾಧ್ಯಕ್ಷ ಆರ್.ಬಿ. ಅಂದಪ್ಪನವರ, ಕರಿಯಮ್ಮದೇವಿ ಮಹಿಳಾ ಮಂಡಳದ ಅಧ್ಯಕ್ಷೆ ರೇಣುಕಾ ಕೇಸರಿ ಉಪಸ್ಥಿತರಿರುವರು.

ಇದೇ ಸಂದರ್ಭದಲ್ಲಿ ಡಾ. ಜಿ.ಬಿ. ಬಿಡಿನಹಾಳ, ಡಾ. ಎನ್.ಎಂ. ಅಂಬಲಿಯವರ, ಡಾ. ಶರಣು ಗೋಗೇರಿ, ಜಯದೇವ ಮೆಣಸಗಿ, ಬಿ.ಎನ್. ಯರನಾಳ, ಶಿಲ್ಪಾ ಕುರಿ, ಡಿ.ಐ. ಅಸುಂಡಿ, ಸುರೇಶ ಕೊಪ್ಪದ, ಪ್ರೊ. ಅಂದಾನಪ್ಪ ವಡಗೇರಿ, ಡಾ. ಭಾರ್ಗವ ಕುರಿ, ಡಾ. ನಾಗರಾಜ ವಡಗೇರಿ, ಡಾ. ಯಶವಂತಕುಮಾರ ಕುರಿ ಅವರನ್ನು ಸನ್ಮಾನಿಸಲಾಗುವದು.

2024ನೇ ಸಾಲಿನ ಎಸ್‌ಎಸ್‌ಎಲ್‌ಸಿ ಮತ್ತು ಪಿಯುಸಿ ಪರೀಕ್ಷೆಯಲ್ಲಿ ಹೆಚ್ಚು ಅಂಕ ಪಡೆದ ವಿದ್ಯಾರ್ಥಿಗಳನ್ನು ಸನ್ಮಾನಿಸಲಾಗುವದು. ಕಾರ್ಯಕ್ರಮದ ನಿರೂಪಣೆಯನ್ನು ಡಾ. ಎಸ್.ಎನ್. ವೆಂಕಟಾಪೂರ ಹಾಗೂ ವಂದನಾರ್ಪಣೆಯನ್ನು ವೈ.ಕೆ. ಪಿಡಗಣ್ಣವರ ಮಾಡಲಿದ್ದಾರೆ. ಇದಕ್ಕೂ ಮುನ್ನ ಬೆಳಿಗ್ಗೆ 8.30 ಗಂಟೆಗೆ ಕುಂಭಮೇಳ ಹಾಗೂ ಮೆರವಣಿಗೆ ನಡೆಯಲಿದೆ ಎಂದು ಪ್ರಕಟಣೆ ತಿಳಿಸಿದೆ.

### ಸಾರಿಗೆ ಸಂಸ್ಥೆಯ ಸಿಬ್ಬಂದಿಗಳ ಮೇಲಿನ ಹಲ್ಲೆ ತಪ್ಪಿಸಿ ರಕ್ಷಣೆ ನೀಡಲು ಮನವಿ

# ಚಾಲಕ, ನಿರ್ವಾಹಕರಿಗೆ ರಕ್ಷಣೆ ಒದಗಿಸಿ

**■ ವಿಜಯಸಾಕ್ಷಿ ಸುದ್ದಿ, ಗದಗ**

ವಾ.ಕ.ರ.ಸಾ ಸಂಸ್ಥೆಯ ಗದಗ ವಿಭಾಗದ ಚಾಲನಾ ಸಿಬ್ಬಂದಿಗಳ ಮೇಲೆ ಆಗುತ್ತಿರುವ ಹಲ್ಲೆಗಳಿಂದ ರಕ್ಷಣೆ ನೀಡಬೇಕೆಂದು ಆಗ್ರಹಿಸಿ ಸಂಸ್ಥೆಯ ವಿವಿಧ ಕಾರ್ಮಿಕ ಸಂಘಟನೆಗಳಿಂದ ಗದಗ ಪೊಲೀಸ್ ಇಲಾಖೆಯ ಡಿಎಸ್ಪಿ ಮೂಲಕ ಗದಗ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗೆ ಶುಕ್ರವಾರ ಮನವಿ ಸಲ್ಲಿಸಲಾಯಿತು.

ಗದಗ ಮುಳಗುಂದ ನಾಕಾ ಬಳಿ ಇರುವ ಸಂಸ್ಥೆಯ ವಿಭಾಗೀಯ ಕಚೇರಿಯ ಮುಂದೆ ಸೇರಿದ ಕಾರ್ಮಿಕ ಸಂಘಟನೆಯ ಮುಖಂಡರು ಘೋಷಣೆಯೊಂದಿಗೆ ಡಿಎಸ್ಪಿ ಕಾರ್ಯಾಲಯದವರೆಗೆ ಪಾದಯಾತ್ರೆ ಕೈಗೊಂಡು ಮನವಿ ಸಲ್ಲಿಸಿದರು.

ವಾ.ಕ.ರ.ಸಾ ಸಂಸ್ಥೆಯ ಗದಗ ವಿಭಾಗದ ಸಿಬ್ಬಂದಿಗಳು ಕರ್ನಾಟಕ ಸರಕಾರ ಅಗತ್ಯ ಸೇವಾ ಕಾಯ್ದೆಯಡಿ ಕರ್ತವ್ಯ ನಿರ್ವಹಿಸುತ್ತಿರುವ ನೌಕರರು, ಅದರಲ್ಲೂ ವಿಶೇಷವಾಗಿ ಬಸ್ ಡ್ರೈವರ್ ಹಾಗೂ ಕಂಡಕ್ಟರ್, ಡಿ ಕಮ್ ಸಿ ಹಗಲು-ರಾತ್ರಿ ಎನ್ನದೇ ದಿನದ 24 ಗಂಟೆಯೂ ಸಾರ್ವಜನಿಕರಿಗೆ ಪ್ರಯಾಣದ ಸೇವೆ ಒದಗಿಸುತ್ತಿದ್ದಾರೆ.

ರಾಜ್ಯ ಸರಕಾರದ ಮಹತ್ವಾಕಾಂಕ್ಷಿ ಯೋಜನೆಯಾದ ಶಕ್ತಿ ಯೋಜನೆಯನ್ನು ಯಶಸ್ವಿಯಾಗಿ ಅನುಷ್ಠಾನಗೊಳಿಸಲು ಡ್ರೈವರ್, ಕಂಡಕ್ಟರ್‌ಗಳು ಶ್ರಮಿಸುತ್ತಿದ್ದಾರೆ. ಶಕ್ತಿ ಯೋಜನೆಯಿಂದಾಗಿ ಬಸ್‌ಗಳಲ್ಲಿ ಪ್ರಯಾಣಿಕರ ಸಂಖ್ಯೆ ಹೆಚ್ಚಿರುವುದರಿಂದ ದಟ್ಟಣೆ, ಗದ್ದಲ ಹೆಚ್ಚಾಗುತ್ತಿದೆ. ಸ್ಟೇಜ್ ದಾಟುವುದರೊಳಗೆ ದಾರಿ ಚೀಟಿ ನೀಡಬೇಕಾದ ನಿಯಮ ಇರುವುದರಿಂದ




ದಾರಿ ಚೀಟಿ ನೀಡಲು ಬಸ್ ನಿಲ್ಲಿಸುತ್ತಿದ್ದಂತೆಯೆ ಪ್ರಯಾಣಿಕರು ಡ್ರೈವರ್-ಕಂಡಕ್ಟರ್ ಮೇಲೆ ಸಿಟ್ಟಾಗುವದು, ಬೈದಾಡುವದು ಅಷ್ಟೇ ಅಲ್ಲದೆ ವಾಗ್ವಾದಕ್ಕಿಳಿದು ಹಲ್ಲೆ ನಡೆಸುವಂತಹ ಕೃತ್ಯ ನಡೆಸುತ್ತಿರುವುದು ಕಳವಳಕಾರಿ ಘಟನೆಯಾಗಿದೆ.

ಒಂದು ವೇಳೆ ಸ್ಟೇಜ್ ದಾಟಿದರೆ ತನಿಖೆಯ ಅಧಿಕಾರಿಗಳು ಸಿಬ್ಬಂದಿಯ ವಿರುದ್ಧ ಪ್ರಕರಣ ದಾಖಲಿಸಿಕೊಂಡು ಸಸ್ಪೆಂಡ್ ಮಾಡುವ ಸಂಭವ ಇರುವುದರಿಂದ ನೌಕರಿ ಮಾಡುವುದೇ ಕಷ್ಟವಾಗಿದೆ. ಕಾರಣ ಈ ಕುರಿತು ಸಂಸ್ಥೆಯ ನೌಕರರ, ಸಿಬ್ಬಂದಿಯ ಮೇಲೆ ಆಗುತ್ತಿರುವ, ಆಗಬಹುದಾದ ಹಲ್ಲೆಗಳನ್ನು ತಪ್ಪಿಸಲು ಅಗತ್ಯ ಕ್ರಮ ಕೈಗೊಂಡು ರಕ್ಷಣೆ ನೀಡಬೇಕು ಎಂದು ಮನವಿಯಲ್ಲಿ ವಿವರಿಸಿದರು.

> ರಾಜ್ಯ ವಿವಿಧ ಜಿಲ್ಲೆಗಳಲ್ಲಿ ಈ ರೀತಿಯ ಹಲ್ಲೆಗಳು ನಡೆಯುತ್ತಿದ್ದು, ಗದಗ ಜಿಲ್ಲೆಯ ಶಿರಹಟ್ಟಿಯಲ್ಲೂ ಇಂತಹ ಘಟನೆಗಳು ನಡೆದು ಪ್ರಕರಣ ದಾಖಲಾಗಿದೆ. ಇದರಿಂದಾಗಿ ಸಂಸ್ಥೆಯ ನೌಕರರು, ಕಾರ್ಮಿಕರು ಭೀತಿಯಲ್ಲಿಯೇ ಕರ್ತವ್ಯ ನಿರ್ವಹಿಸುವಂತಾಗಿದೆ ಎಂದು ಮನವಿಯಲ್ಲಿ ವಿವರಿಸಲಾಗಿದೆ.

> ಸಾರಿಗೆ ಸಿಬ್ಬಂದಿಯ ಮೇಲೆ ಆಗುವ ಹಲ್ಲೆಯನ್ನು ಬಲವಾಗಿ ಖಂಡಿಸುತ್ತೇವೆ. ಸಂಸ್ಥೆಯ ಅಧಿಕಾರಿಗಳು, ಪೊಲೀಸ್ ಅಧಿಕಾರಿಗಳು ರಕ್ಷಣೆ ನೀಡಲು ಅಗತ್ಯ ಕ್ರಮ ಕೈಗೊಳ್ಳಬೇಕು. ಪ್ರಯಾಣಿಕರು ಡ್ರೈವರ್-ಕಂಡಕ್ಟರ್‌ಗೆ ಪರಸ್ಪರ ಸಹಕಾರ ನೀಡಿದರೆ ಉತ್ತಮ ಸೇವೆ ನೀಡಲು ಸಾಧ್ಯ. ಇದರಿಂದ ಸಂಸ್ಥೆಗೂ ಲಾಭ.
>
> **– ಶಾಂತಣ್ಣ ಮುಳವಾಡ.**
> ಕಾರ್ಮಿಕ ಮುಖಂಡರು.

ಮನವಿ ಸ್ವೀಕರಿಸಿದ ಪ್ರಭಾರ ಡಿಎಸ್ಪಿ ಮಹಾಂತೇಶ ಸಜ್ಜನ, ಮನವಿಯನ್ನು ಸೂಕ್ತ ಕ್ರಮಕ್ಕಾಗಿ ಹಿರಿಯ ಅಧಿಕಾರಿಗಳಿಗೆ ತಲುಪಿಸುವದಾಗಿ ಹೇಳಿದರು.

ಈ ಸಂದರ್ಭದಲ್ಲಿ ಕಾರ್ಮಿಕ ಮುಖಂಡರಾದ ಶಾಂತಣ್ಣ ಮುಳವಾಡ, ನಾಗರಾಜ ಬಳ್ಳಾರಿ, ಎಸ್.ಎಫ್. ಸಂಗಣ್ಣವರ, ಸಂತೋಷ ಕುಲಕರ್ಣಿ, ಗೋಪಾಲ ರಾಯರು, ಎಂ.ಎಚ್. ಪೂಜಾರ, ಎಫ್.ಎಚ್. ಗೌಡರ, ಎ.ಜಿ. ಸುಂಕದ, ಬಿ.ಎಚ್. ರಾಮೇನಹಳ್ಳಿ, ಎಚ್.ಸಿ. ಕೊಪ್ಪಳ, ಎಂ.ಆಂಜನೇಯ, ಎಸ್.ಕೆ. ಭಜಂತ್ರಿ, ಎಸ್.ಕೆ. ಅಯ್ಯನಗೌಡರ, ಎ.ಕೆ. ಕರ್ನಾಚಿ, ಜಿ.ಆರ್. ಆದಿ, ಆಂಜನೇಯ ಕುಂಬಾರ, ಲಕ್ಷ್ಮೀ ಸಾಲಮನಿ, ವಿದ್ಯಾ ಮೇಘರಾಜ, ವೀಣಾ ಚವ್ಹಾಣ, ಜೆ.ಜೆ. ಪಠಾಣ, ಸಿದ್ಧಪ್ಪ ಗದಗಿನ, ಮಲ್ಲಪ್ಪ ಅವ್ವಣ್ಣವರ, ಅಶೋಕ ಸಂಗಟಿ, ಕೆಂಚಪ್ಪ ಡೊಳ್ಳಿನ, ಈರಣ್ಣ ಜವಳಿ, ಬಸವರಡ್ಡಿ, ವ್ಹಿ.ವ್ಹಿ. ಗೋದಿ ಮುಂತಾದವರು ಪಾಲ್ಗೊಂಡಿದ್ದರು.

# ಚಿದಂಬರೇಶ್ವರ ಜಯಂತ್ಯುತ್ಸವ ಸಂಪನ್ನ

**■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**



ಪಟ್ಟಣದ ಹಿರೇಬಣದಲ್ಲಿ ಜೀರ್ಣೋದ್ಧಾರಗೊಂಡ ನೂತನ ಚಿದಂಬರೇಶ್ವರ ದೇವಸ್ಥಾನದಲ್ಲಿ ಗುರುವಾರ ಚಿದಂಬರೇಶ್ವರ ಜಯಂತ್ಯುತ್ಸವವನ್ನು ಸಂಪ್ರದಾಯದಂತೆ ಹಲವು ಧಾರ್ಮಿಕ ಕಾರ್ಯಕ್ರಮಗಳೊಂದಿಗೆ ಆಚರಿಸಲಾಯಿತು.

ಗುರುವಾರ ಮುಂಜಾನೆ ಕಾಕಡಾರತಿಯೊಂದಿಗೆ ಪ್ರಾರಂಭವಾದ ಕಾರ್ಯಕ್ರಮದಲ್ಲಿ ಹಿರಿಯ ಋತ್ವಿಜರಾದ ಅನಂತಭಟ್ ಜೋಶಿ ಅವರ ನೇತೃತ್ವದಲ್ಲಿ ಚಿಕ್ಕಣ್ಣಭಟ್ ಜೋಶಿ, ಶ್ರೀಪಾದಭಟ್ ಜೋಶಿ, ನಾಗರಾಜ ಪೂಜಾರ, ನರಸಿಂಹಭಟ್ ಜೋಶಿ ಇವರ ಉಪಸ್ಥಿತಿಯಲ್ಲಿ ವೇದಘೋಷಗಳೊಂದಿಗೆ ಚಿದಂಬರ ಸ್ವಾಮಿಗೆ ರುದ್ರಾಭಿಷೇಕವನ್ನು ನೆರವೇರಿಸಿದರು. ಮದ್ಯಾಹ್ನ 12 ಗಂಟೆಗೆ ಚಿದಂಬರೇಶ್ವ ತೊಟ್ಟಿಲೋತ್ಸವ ಕಾರ್ಯಕ್ರಮವು ಸುಮಂಗಲಿಯರು ಹಾಗೂ ಮಹಿಳಾ ಭಜನಾ ಮಂಡಳಿಯ ಸದಸ್ಯರ ಸಮ್ಮುಖದಲ್ಲಿ ವಿಧಿವತ್ತಾಗಿ ನಡೆಸಲಾಯಿತು. ನಂತರ ಮಹಾಮಂಗಳಾರತಿ, ಭಜನೆಗಳು ಜರುಗಿದವು.

ಸಂಜೆ 6 ಗಂಟೆಗೆ ದೇವಸ್ಥಾನದ ಆವರಣದಲ್ಲಿ ದೀಪೋತ್ಸವ ಕಾರ್ಯಕ್ರಮವು ಜರುಗಿತು. ಈ ಸಂದರ್ಭದಲ್ಲಿ ಸಾಂಪ್ರದಾಯಿಕ ಭಜನೆ, ಪಾವನಾ ಕುಲಕರ್ಣಿ ಅವರಿಂದ ಸಂಗೀತ ಸೇವೆ ನಡೆಯಿತು. ದೇವಸ್ಥಾನದ ಧರ್ಮದರ್ಶಿ ಪ್ರಕಾಶ ಕುಲಕರ್ಣಿ, ಪ್ರಸನ್ನ ಕುಲಕರ್ಣಿ ಧನಲಕ್ಷ್ಮೀ ಕುಲಕರ್ಣಿ, ಹಿರಿಯ ವಕೀಲ ವಿ.ಎಲ್. ಪೂಜಾರ, ಗೋಪಾಲ ಪಡ್ನೀಸ್, ಕೆ.ಎಸ್. ಕುಲಕರ್ಣಿ, ಅರವಿಂದ ದೇಶಪಾಂಡೆ, ಗುರರಾಜ ಪಾಟೀಲ, ಮಹಾದೇವಗೌಡ ಪಾಟೀಲ, ಯಲ್ಲಪ್ಪ ಮಾಚೇನಹಳ್ಳಿ, ರಾಜು ಕಳ್ಳಿ ಸೇರಿದಂತೆ ಅನೇಕರಿದ್ದರು.

# ಗುತ್ತಿಗೆದಾರರ ವಿರುದ್ಧ ಕ್ರಮಕ್ಕೆ ಆಗ್ರಹಿಸಿ ಪ್ರತಿಭಟನೆ

**■ ವಿಜಯಸಾಕ್ಷಿ ಸುದ್ದಿ, ಗದಗ**



ಗದಗ-ಬೆಟಗೇರಿ ನಗರದ ಕೊಳಗೇರಿ ಪ್ರದೇಶಗಲ್ಲಿ ಮನೆಗಳನ್ನು ನಿರ್ಮಿಸಲು ಕೇಂದ್ರ ಹಾಗೂ ರಾಜ್ಯ ಸರ್ಕಾರದ ಸಹಯೋಗದಲ್ಲಿ 863 ಮನೆಗಳು ಮಂಜೂರಾಗಿದ್ದು, ಮನೆ ನಿರ್ಮಾಣದಲ್ಲಿ ಭಾರೀ ಭ್ರಷ್ಟಾಚಾರ ನಡೆಸಲಾಗುತ್ತಿರುವ ಕುರಿತು ಅನೇಕ ಬಾರಿ ಅಧಿಕಾರಿಗಳ ಗಮನಕ್ಕೆ ತಂದರೂ ಪ್ರಯೋಜನವಾಗಿಲ್ಲ. ಕೂಡಲೇ ಈ ಗುತ್ತಿಗೆದಾರರ ವಿರುದ್ಧ ಕ್ರಮಕ್ಕೆ ಆಗ್ರಹಿಸಿ ಗದಗ ಜಿಲ್ಲಾ ಸ್ಲಂ ಸಮಿತಿ ನೇತೃತ್ವದಲ್ಲಿ ಸ್ಲಂ ಬೋರ್ಡ್ ಕಚೇರಿ ಮುಂದೆ ಪ್ರತಿಭಟನೆ ನಡೆಸಿ ಅಧಿಕಾರಿಗಳಿಗೆ ಮನವಿ ಸಲ್ಲಿಸಿದರು.

ಗದಗ ಜಿಲ್ಲಾ ಸ್ಲಂ ಸಮಿತಿ ಅಧ್ಯಕ್ಷ ಇಮ್ತಿಯಾಜ ಆರ್,ಮಾನ್ವಿ ಮಾತನಾಡಿ, ಅಧಿಕಾರಿಗಳು ಸ್ಲಂ ಸಮಿತಿಯ ಮನವಿಗೆ ಪ್ರಾಮಾಣಿಕವಾಗಿ ಸ್ಪಂದಿಸದೇ ನಮ್ಮ ಬೇಡಿಕೆಗಳನ್ನು ನಿರ್ಲಕ್ಷ್ಯ ಮಾಡಿದ್ದಾರೆ. ಸ್ಲಂ ಬೋರ್ಡ್ ಅಧಿಕಾರಿಗಳು ಹಾಗೂ ಗುತ್ತಿಗೆದಾರರು ಸೇರಿ ಸ್ಲಂ ಜನರಿಗೆ ಮೋಸ ಮಾಡಿ ಸರ್ಕಾರದ ವಸತಿ ಯೋಜನೆಯ ಮನೆಗಳನ್ನು ಮಾರಾಟ ಮಾಡುವ ವ್ಯವಹಾರಕ್ಕೆ ನಿಂತಿರುವುದನ್ನು ಗದಗ ಜಿಲ್ಲಾ ಸ್ಲಂ ಸಮಿತಿಯಿಂದ ಖಂಡಿಸುತ್ತೇವೆ. ಹಕ್ಕುಪತ್ರಗಳ ನೋಂದಣಿಯಲ್ಲಿ ಈ ಹಿಂದೆ ನಡೆಸಲಾಗಿರುವ ಹಣದ ಅವ್ಯವಹಾರ ಕುರಿತು ಕಚೇರಿ ಸಿಬ್ಬಂದಿಗಳ ಮೇಲೆ ಕ್ರಮ ಕೈಗೊಳ್ಳಬೇಕು ಎಂದು ಆಗ್ರಹಿಸಿದರು.

ಈ ಸಂದರ್ಭದಲ್ಲಿ ಸ್ಲಂ ಸಮಿತಿಯ ಪ್ರಮುಖರಾದ ಅಶೋಕ ಕುಸಬಿ, ಪರವೀನಬಾನು ಹವಾಲ್ದಾರ, ಇಬ್ರಾಹಿಂ ಮುಲ್ಲಾ, ಮೌಲಾಸಾಬ ಗಚ್ಚಿ, ದುರ್ಗಪ್ಪ ಮಣ್ಣವಡ್ಡರ, ಮೆಹರುನಿಸಾ ಡಂಬಳ, ಮೈಮುನ ಬೈರಕದಾರ, ಆಯೀಷಾ ಉಮಚಗಿ, ಪ್ರೇಮಾ ಮಣವಡ್ಡರ, ಸುಶೀಲಮ್ಮ ಗೊಂದಾರ, ಮೆಹಬೂಬಸಾಬ ಬಳ್ಳಾರಿ, ಸಾಕ್ರುಬಾಯಿ ಗೋಸಾವಿ, ಖಾಜೇಸಾಬ ಇಸ್ಮಾಯಿಲನವರ, ಮಕ್ತುಮಸಾಬ ಮುಲ್ಲಾನವರ, ಈರಮ್ಮ ಬೇವಿನಮರದ, ನಾಗರಾಜ ಮಣವಡ್ಡರ, ದಾದು ಗೋಸಾವಿ, ಮಲೇಶಪ್ಪ ಕಲಾಲ, ಚಂದ್ರಪ್ಪ ಲಕ್ಕುಂಡಿ, ಶಂಕ್ರಪ್ಪ ಹದ್ಲಿ ಮುಂತಾದವರು ಭಾಗವಹಿಸಿದ್ದರು.

# ಸಾರ್ವಜನಿಕರ ಗಮನಕ್ಕೆ

**■ ವಿಜಯಸಾಕ್ಷಿ ಸುದ್ದಿ, ಗದಗ**

ಜಿಲ್ಲೆಯ ರೋಣ ಪುರಸಭೆ ಪ್ರತಿ ವರ್ಷ ಸ್ವಚ್ಛ ಸರ್ವೇಕ್ಷಣಯಲ್ಲಿ ಅತಿ ಉತ್ತಮ ಪ್ರಗತಿ ಸಾಧಿಸಿದ್ದು, ಪ್ರಸುತ್ತ ಸಾಲಿನಲ್ಲಿ ರೋಣ ಪುರಸಭೆಯನ್ನು ತ್ಯಾಜ್ಯ ಮುಕ್ತಗೊಳಿಸುವಲ್ಲಿ (ಜಿ.ಎಫ್.ಸಿ) ಸಾರ್ವಜನಿಕರ ಸಹಕಾರ ಹಾಗೂ ಪಾಲ್ಗೊಳ್ಳುವಿಕೆಯಿಂದ ಯಶ್ವಸಿಯಾಗಿದೆ.

ರೋಣ ನಗರಕ್ಕೆ ಒಂದು ಸ್ಟಾರ್/ಮೂರು ಸ್ಟಾರ್ (ಸಿಂಗಲ್/ತ್ರಿಬಲ್ ಸ್ಟಾರ್) ನಗರವೆಂದು ಘೋಷಿಸಿಸುವ ಸಲುವಾಗಿ ತಮ್ಮ ಸಲಹೆ ಸೂಚನೆಗಳು ಇದ್ದಲ್ಲಿ ಪುರಸಭೆ ಕಾರ್ಯಾಲಯಕ್ಕೆ ಏಳು ದಿನಗಳ ಒಳಗಾಗಿ ತಿಳಿಸಬಹುದಾಗಿದೆ ಎಂದು ಪುರಸಭೆ ಮುಖ್ಯಾಧಿಕಾರಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ರಾಜ್ಯಮಟ್ಟದ ಕರಾಟೆಯಲ್ಲಿ ಸಾಧನೆ



**■ ವಿಜಯಸಾಕ್ಷಿ ಸುದ್ದಿ, ಗದಗ**

2024-25ನೇ ಸಾಲಿನ ಶಾಲಾ ಶಿಕ್ಷಣ ಇಲಾಖೆ (ಪದವಿಪೂರ್ವ) ಬೆಂಗಳೂರು ಹಾಗೂ ರಾಘವೇಂದ್ರ ಹೈಟೆಕ್ ಪದವಿಪೂರ್ವ ಕಾಲೇಜು ಡಾವಣಗೆರೆ ಇವರ ಸಹಯೋಗದಲ್ಲಿ ಡಾವಣಗೆರೆಯಲ್ಲಿ ಆಯೋಜಿಸಲಾಗಿದ್ದ ರಾಜ್ಯ ಮಟ್ಟದ ಪದವಿಪೂರ್ವ ಕಾಲೇಜುಗಳ ಕರಾಟೆ ಸ್ಪರ್ಧೆಗಳಲ್ಲಿ ಇಲ್ಲಿನ ಸ್ಟುಡೆಂಟ್ ಎಜುಕೇಶನ್ ಸೊಸೈಟಿಯ ಸನ್ಮಾರ್ಗ ಪದವಿಪೂರ್ವ ವಿಜ್ಞಾನ ಮತ್ತು ವಾಣಿಜ್ಯ ಮಹಾವಿದ್ಯಾಲಯದ ವಿದ್ಯಾರ್ಥಿಗಳಾದ ಹರ್ಷಿತಾ ಬಾಕಳೆ (-44 ಕೆ.ಜಿ) ದ್ವಿತೀಯ ಸ್ಥಾನ ಹಾಗೂ ವಿಜ್ಞಾನ ವಿಭಾಗದ ವಿದ್ಯಾರ್ಥಿ ಸಾಹಿಲ್ ವೆರ್ಣೇಕರ್ (-58 ಕೆ.ಜಿ) ತೃತೀಯ ಸ್ಥಾನ ಗಳಿಸಿದ್ದಾರೆ.

ರಾಜ್ಯಮಟ್ಟದ ಸ್ಪರ್ಧೆಯಲ್ಲಿ ಮಿಂಚಿದ ಈ ವಿದ್ಯಾರ್ಥಿಗಳಿಗೆ ಗದಗ ಜಿಲ್ಲಾ ಪದವಿಪೂರ್ವ ಉಪನಿರ್ದೇಶಕರಾದ ಸಿದ್ಧಲಿಂಗ ಬಂಡೂ ಮಸನಾಯಕ, ಸಂಸ್ಥೆಯ ಚೇರಮನ್ ಪ್ರೊ. ರಾಜೇಶ ಕುಲಕರ್ಣಿ, ಪ್ರಾಚಾರ್ಯ ಪ್ರೊ. ಪ್ರೇಮಾನಂದ ರೋಣದ, ಆಡಳಿತಾಧಿಕಾರಿ ಎಂ.ಸಿ. ಹಿರೇಮಠ, ನಿರ್ದೇಶಕರಾದ ಪ್ರೊ. ರೋಹಿತ ಒಡೆಯರ, ರಾಹುಲ ಒಡೆಯರ, ಪ್ರೊ. ಪುನೀತ ದೇಶಪಾಂಡೆ, ಪ್ರೊ. ಸೈಯ್ಯದ್ ಮತೀನ್ ಮುಲ್ಲಾ ಸೇರಿದಂತೆ ಉಪನ್ಯಾಸಕರು ಹಾಗೂ ಸಿಬ್ಬಂದಿ ವರ್ಗದವರು ಅಭಿನಂದಿಸಿದ್ದಾರೆ.

# ನ. 29 ರಂದು ಅಂಚೆ ಅದಾಲತ್

**■ ವಿಜಯಸಾಕ್ಷಿ ಸುದ್ದಿ, ಗದಗ**

ಅಂಚೆ ಸೇವೆಗೆ ಸಂಬಂಧಿಸಿದಂತೆ ನವೆಂಬರ್ 29ರ ಮಧ್ಯಾಹ್ನ 3.00 ಘಂಟೆಗೆ ಅಂಚೆ ಅಧೀಕ್ಷಕರ ಕಾರ್ಯಾಲಯ, ಗದಗ ಕಚೇರಿಯಲ್ಲಿ ವಿಭಾಗೀಯ ಮಟ್ಟದ ಅಂಚೆ ಅದಾಲತ್ ನಡೆಯಲಿದೆ.

ಅಂಚೆ ಸೇವೆಗೆ ಸಂಬಂಧಪಟ್ಟ ದೂರು, ಸಲಹೆ, ಸೂಚನೆಗಳಿದ್ದರೆ ನವೆಂಬರ್ 28ರ ಒಳಗಾಗಿ ಅಂಚೆ ಅಧೀಕ್ಷಕರ ಕಚೇರಿ, ಎಪಿಎಂಸಿ ಯಾರ್ಡ್ ಗದಗ, ಈ ವಿಳಾಸಕ್ಕೆ ಅಂಚೆ ಚೀಟಿಯನ್ನು ಲಗತ್ತಿಸದೆಯೂ ಅರ್ಜಿಯನ್ನು ಸಲ್ಲಿಸಬಹುದು.

ಮಾಹಿತಿಗಾಗಿ ದೂರವಾಣಿ ಸಂಖ್ಯೆ : 08372-277823 ಗೆ ಸಂಪರ್ಕಿಸಬಹುದು.

# ಅವಳಿ ನಗರದಲ್ಲಿ ಲಾರ್ವಾ ಸಮೀಕ್ಷೆ



**■ ವಿಜಯಸಾಕ್ಷಿ ಸುದ್ದಿ, ಗದಗ**

ಪ್ರತಿ ತಿಂಗಳು ಮೊದಲ ಮತ್ತು 3ನೇ ಶುಕ್ರವಾರ ಆರೋಗ್ಯ ಇಲಾಖೆಯಿಂದ ಗದಗ-ಬೆಟಗೇರಿ ಅವಳಿ ನಗರದಲ್ಲಿ ಲಾರ್ವಾ ಸಮೀಕ್ಷೆಯನ್ನು ಹಿರಿಯ ಮತ್ತು ಕಿರಿಯ ಆರೋಗ್ಯ ನಿರಿಕ್ಷಣಾಧಿಕರಿಗಳು, ಪ್ರಾಥಮಿಕ ಆರೋಗ್ಯ ಸುರಕ್ಷಾಧಿಕಾರಿಗಳು ಮತ್ತು ಆಶಾ ಕಾರ್ಯಕರ್ತೆಯರಿಂದ ನಡೆಸಲಾಗುತ್ತದೆ. ಸಾರ್ವಜನಿಕರು ಆರೋಗ್ಯ ಇಲಾಖೆಗೆಯು ನೀಡುವ ಮಾಹಿತಿ ಮತ್ತು ಮಾರ್ಗದರ್ಶನದಿಂದ ಲಾರ್ವಾ ನಾಶಪಡಿಸಿ ಸೊಳ್ಳೆಗಳನ್ನು ನಿಯಂತ್ರಿಸಿದರೆ ಡೆಂಘೀ ಜ್ವರ, ಚಿಕುಂಗುನ್ಯ, ಮಲೇರಿಯಾ ರೋಗಗಳನ್ನು ನಿಯಂತ್ರಣ ಮಾಡಬಹುದೆಂದು ಜಿಲ್ಲಾ ರೋಗವಾಹಕ ಆಶ್ರಿತ ರೋಗಗಳ ನಿಯಂತ್ರಣಾಧಿಕಾರಿ ಡಾ.ಎಚ್.ಎಲ್ ಗಿರಡ್ಡಿ ಹೇಳಿದರು.

ಅವರು ಗದುಗಿನ ರೆಹಮತ್ ನಗರದಲ್ಲಿ ಲಾರ್ವಾ ಸಮಿಕ್ಷಾ ತಂಡಗಳ ಕಾರ್ಯ ಪರಿಶೀಲನೆ ಮತ್ತು ಮನೆ ಮನೆ ಭೇಟಿ ಸಂದರ್ಭದಲ್ಲಿ ಸಾರ್ವಜನಿಕರಲ್ಲಿ ರೋಗಗಳ ಬಗ್ಗೆ ಜಾಗೃತಿಯನ್ನು ಮೂಡಿಸಿದರು.

ಈ ಸಂದರ್ಭದಲ್ಲಿ ಹಿರಿಯ ಆರೋಗ್ಯ ನಿರೀಕ್ಷಣಾಧಿಕಾರಿಗಳಾದ ವಾಯ್.ವಾಯ್. ಹಕ್ಕಿ, ಎನ್.ಎನ್. ಪಾಟೀಲ, ಕೃಷ್ಣಾ ಗಾಡರಡ್ಡಿ, ಕರ್ಜಗಿ ಆರೋಗ್ಯ ನಿರೀಕ್ಷಣಾಧಿಕಾರಿಗಳಾದ ಶಿದ್ದಪ್ಪ ಎನ್.ಲಿಂಗದಾಳ, ವಾಯ್.ಎನ್. ಕಡೆಮನಿ, ನಾಗರಾಜ ಜೋಷಿ, ಬಿ.ಸಿ. ಹಿರೇಹಾಳ, ಶೀಲಾ ಮಳೆಕರ, ಸವಿತಾ ಪವಾರ್, ಎಸ್.ಬಿ. ಗಡಾದ, ನೀತಾ ರಾಣಿ ಕಾಂಬಳೆ, ಕವಿತಾ ಬೇವಿನಕಟ್ಟಿ, ಆರ್ ರಾಮಗಿರಿ ಮುಂತಾದವರು ಪಾಲ್ಗೊಂಡಿದ್ದರು.

# ರಾಜ್ಯ ಸರ್ಕಾರದಿಂದ ರೈತರ ಮೇಲೆ ದಬ್ಬಾಳಿಕೆ

▶▶ ಮೊದಲನೇ ಪುಟದಿಂದ

ಈ ಸಂದರ್ಭದಲ್ಲಿ ಬಿಜೆಪಿ ಜಿಲ್ಲಾಧ್ಯಕ್ಷ ರಾಜು ಕುರಡಗಿ, ಕಾಂತಿಲಾಲ್ ಬನ್ಸಾಲಿ, ಉಮೇಶಗೌಡ್ರ ಪಾಟೀಲ, ಶ್ರೀಪತಿ ಉಡುಪಿ, ಶಿವಕುಮಾರ ನಿಲಗುಂದ, ಸುರೇಶ್ ಗೂಳಮ್ಮನವರ, ಸಿದ್ದಣ್ಣ ಪಲ್ಲೇದ್, ಅಶೋಕ ಹೆಬ್ಬಣ್ಣನವರ, ಶಾಂತಣ್ಣ ಕಲಕೇರಿ, ಪ್ರೇಮನಾಥ ಬಣ್ಣದ, ನಿರ್ಮಲಾ ಕೊಳ್ಳಿ, ಅಶ್ವಿನಿ ಜಗಾಪೂರ, ವಿಜಯಲಕ್ಷ್ಮೀ ದಿಂಡೂರ, ವಿದ್ಯಾವತಿ ಗಡಗಿ, ಜಯಲಕ್ಷ್ಮೀ ಉಗಲಾಟದ, ವಿಜಯಲಕ್ಷ್ಮೀ ಮಾನ್ವಿ, ಪ್ರಭಾವತಿ ಬೆಳವಟ, ಲಕ್ಷ್ಮೀ ಖಾಕಿ, ಶಿವಪ್ಪ ಅಂಗದ, ಇರ್ಷಾದ್ ಮಾನ್ವಿ, ಸುದೀರ ಕಾಟಗೇರ, ಮಂಜುನಾಥ ಮುಳಗುಂದ, ಸಂತೋಷ್ ಅಕ್ಕಿ, ಸಂಗಮೇಶ್ ದುಂದೂರ, ಶಶಿಧರ ದಿಂಡೂರ, ರಮೇಶ್ ಸಜ್ಜಗಾರ, ಅಶ್ವಿನಿ ಅಂಕಲಕೋಟಿ, ಸ್ವಾತಿ ಅಕ್ಕಿ, ಬಸವರಾಜ ಇಟಗಿ, ಸಿದ್ದೇಶ್ ಹೂಗಾರ, ಚನ್ನಪ್ಪ ನೆಗಳೂರ, ನಾಗರಾಜ ಕುಲಕರ್ಣಿ, ಚಂದ್ರಶೇಖರ ತಡಸದ, ಎಮ್.ಎಚ್. ತಿಮ್ಮನಗೌಡ್ರ, ಪ್ರಕಾಶಗೌಡ ತಿರಕನಗೌಡ್ರ, ಲಿಂಗರಾಜ ಪಾಟೀಲ, ಮಹೇಶ್ ದಾಸರ ಸೇರಿದಂತೆ ಅನೇಕರು ಉಪಸ್ಥಿತರಿದ್ದರು.

# ನಿಧನ

## ಸುಶೀಲ ದುಂದರೆಡ್ಡಿ



ಗದಗ: ನಗರದ ಹುಡ್ಕೊ ಕಾಲೋನಿಯ ಸಿದ್ಧಲಿಂಗ ನಗರ ನಿವಾಸಿ ಶ್ರೀ ಮತಿ ಸುಶೀಲ ಕೋಂ ಮಲ್ಲಿಕಾರ್ಜುನ ದುಂಡರೆಡ್ಡಿ (73) ಶುಕ್ರವಾರದಂದು ನಿಧನರಾದರು.

ಮೃತರ ಅಂತ್ಯಕ್ರಿಯೆ ಶನಿವಾರ ಬೆಳಿಗ್ಗೆ 10 ಗಂಟೆಗೆ ನಡೆಯಲಿದೆ. ಮೃತರಿಗೆ ಪತಿ, ಇಬ್ಬರು ಗಂಡು ಮಕ್ಕಳು ಇದ್ದಾರೆ.



ಲಕ್ಕುಂಡಿಯ ಪಾರಂಪರಿಕ, ಐತಿಹಾಸಿಕ ವೈಭವನ್ನು ಪುನಃ ಸ್ಥಾಪಿಸುವ ಉದ್ದೇಶದಿಂದ ಲಕ್ಕುಂಡಿ ಗ್ರಾಮದಲ್ಲಿ ಹಮ್ಮಿಕೊಂಡಿರುವ ಪ್ರಾಚ್ಯಾವಶೇಷಗಳ ಅನ್ವೇಷಣೆ ಕಾರ್ಯದಲ್ಲಿ ಪ್ರತಿಯೊಬ್ಬರೂ ಪಾಲ್ಗೊಂಡು ಪ್ರಾಚ್ಯಾವಶೇಷಗಳ ಸಂಗ್ರಹಣೆ ಮಾಡುವ ಮೂಲಕ ಲಕ್ಕುಂಡಿಯ ವೈಭವವನ್ನು ಮತ್ತೆ ಸ್ಥಾಪಿಸೋಣ ಎಂಬ ಜಿಲ್ಲಾ ಉಸ್ತುವಾರಿ ಸಚಿವ ಎಚ್.ಕೆ. ಪಾಟೀಲರ ಮನವಿ ಪತ್ರವನ್ನು ಲಕ್ಕುಂಡಿ ಗ್ರಾಮದ ಪ್ರತಿ ಮನೆ ಮನೆಗೂ ತಲುಪಿಸಿ ಪ್ರಾಚ್ಯಾವಶೇಷಗಳ ಅನ್ವೇಷಣೆ ಕುರಿತು ಅರಿವು ಮೂಡಿಸಲಾಯಿತು.



ಕೆ.ಎಲ್.ಇ. ಸಂಸ್ಥೆಯ ನಿರ್ದೇಶಕರಾದ ಶಂಕ್ರಣ್ಣ ಮುನವಳ್ಳಿಯವರಿಗೆ ರಾಜ್ಯ ಸರ್ಕಾರದ ಸಹಕಾರ ಕ್ಷೇತ್ರದ ಪ್ರತಿಷ್ಠಿತ ಸಹಕಾರ ರತ್ನ ಪ್ರಶಸ್ತಿ ಲಭಿಸಿದ ನಿಮಿತ್ತ ಗದಗ ಜಿಲ್ಲಾ ವಾಣಿಜ್ಯೋದ್ಯಮ ಸಂಸ್ಥೆಯ ಅಧ್ಯಕ್ಷ ತಾತನಗೌಡ ಎಸ್.ಪಾಟೀಲ ಇವರ ನಿಯೋಗದಲ್ಲಿ ಸನ್ಮಾನಿಸಲಾಯಿತು. ಈ ಸಂದರ್ಭದಲ್ಲಿ ಸಂಸ್ಥೆಯ ಉಪಾಧ್ಯಕ್ಷ ಶರಣಬಸಪ್ಪ ಗುಡಿಮನಿ, ವಿಜಯಕುಮಾರ ಎಸ್.ಮಾಟಲದಿನ್ನಿ, ಎಸ್.ಆರ್. ನಾಲತ್ವಾಡಮಠ, ಸಹ ಗೌರವ ಕಾರ್ಯದರ್ಶಿ ಸೋಮನಾಥ ಜಾಲಿ, ರಾಘವೇಂದ್ರ ಕಾಲವಾಡ, ಕೋಶಾಧ್ಯಕ್ಷ ಸಂಜಯ ಬಾಗಮಾರ, ಮಾಜಿ ಅಧ್ಯಕ್ಷ ಅಶೋಕ ನಿಲೂಗಲ್, ಈಶ್ವರಪ್ಪ ಮುನವಳ್ಳಿ ಉಪಸ್ಥಿತರಿದ್ದರೆಂದು ಅಶೋಕಗೌಡ ಪಾಟೀಲ ತಿಳಿಸಿದ್ದಾರೆ.

**ಜಿಲ್ಲಾ ಕಸಾಪ ವತಿಯಿಂದ ತೋಂಟದ ಸಿದ್ಧಲಿಂಗಶ್ರೀಗಳ ಕನ್ನಡ ಭವನದಲ್ಲಿ ಕಾರ್ಯಕ್ರಮ**

# ದೇಸಾಯಿ ದತ್ತಿ ಪ್ರಶಸ್ತಿ ಪ್ರದಾನ ಇಂದು

**■ವಿಜಯಸಾಕ್ಷಿ ಸುದ್ದಿ, ಗದಗ**

ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತು ಗದಗ ವತಿಯಿಂದ ನ.23ರಂದು ಸಂಜೆ 6 ಗಂಟೆಗೆ ಇಲ್ಲಿನ ಸಾಹಿತ್ಯ ಪರಿಷತ್ ಕಾರ್ಯಾಲಯದ ತೋಂಟದ ಸಿದ್ಧಲಿಂಗಶ್ರೀಗಳ ಕನ್ನಡ ಭವನದಲ್ಲಿ ಶ್ರೀಮತಿ ಶೇಕುಬಾಯಿ ಎಲ್.ದೇಸಾಯಿ ಸ್ಮರಣಾರ್ಥ ದತ್ತಿ ಪ್ರಶಸ್ತಿ ಪ್ರದಾನ ಸಮಾರಂಭವನ್ನು ಆಯೋಜಿಸಲಾಗಿದೆ.

ಹೆಸರಾಂತ ವೈದ್ಯರಾದ ಡಾ. ಕೆ.ಡಿ. ಗೋಡಖಿಂಡಿ ಇವರು ಬಾಳೆಹಣ್ಣು ವ್ಯಾಪಾರಿಗಳಾದ ಮಮತಾಜಬಿ ಬಾಬುಸಾಬ ಕುಸುಗಲ್‌ಗಿಗೆ ಪ್ರಶಸ್ತಿ ಪ್ರದಾನವನ್ನು ಮಾಡುವರು. ಕಾರ್ಯಕ್ರಮದ ಅಧ್ಯಕ್ಷತೆಯನ್ನು ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತಿನ ಅಧ್ಯಕ್ಷ ವಿವೇಕಾನಂದಗೌಡ ಪಾಟೀಲ ವಹಿಸುವರು.

ಇದೇ ಸಂದರ್ಭದಲ್ಲಿ ನಾಟಕ ಅಕಾಡೆಮಿ ಪ್ರಶಸ್ತಿ ಪುರಸ್ಕೃತರಾದ ಪ್ರೊ. ಚಂದ್ರಶೇಖರ ವಸ್ತ್ರದ, ಶ್ರೇಷ್ಠ ಅಧ್ಯಾಪಕ ಪ್ರಶಸ್ತಿ ಪುರಸ್ಕೃತರಾದ ಡಾ. ಉಮೇಶ ಪುರದ, ರಾಜ್ಯೋತ್ಸವ ಪ್ರಶಸ್ತಿ ಪುರಸ್ಕೃತರಾದ ಸುರೇಶ ಟಾಕರೆಪ್ಪ ಲಮಾಣಿ ಕಳಸಾಪೂರ, ಕರ್ನಾಟಕ ಕಾರ್ಯನಿರತ ದಿನಪತ್ರಿಕೆ ಸಂಪಾದಕರ ಸಂಘದ ಅಧ್ಯಕ್ಷರಾದ ಜಗದೀಶ ಪೂಜಾರ, ರೋಣದ ನಿವೃತ್ತ ಅಧ್ಯಾಪಕ ಪಿ.ಎಚ್. ಕಡಿವಾಲ, ರಾಜ್ಯ ಶಿಕ್ಷಕ ಪ್ರಶಸ್ತಿ ಪುರಸ್ಕೃತರಾದ ರತ್ನಾ ಬದಿ ಶಿರಹಟ್ಟಿ, 'ಕನಕ ಗೌರವ ಪ್ರಶಸ್ತಿ' ಪುರಸ್ಕೃತರಾದ ಡಾ. ಎಂ.ಎನ್. ಅಂಬಲಿಯುವರ ಗದಗ, ಗದುಗಿನ ಶರಣ ಸಾಹಿತ್ಯ ಪರಿಷತ್ತಿನ ಅಧ್ಯಕ್ಷರಾದ ಕೆ.ಎ. ಬಳಿಗೇರ, ಸಮಾಜ ಸೇವಕರಾದ ಬಾಲಚಂದ್ರ ಭರಮಗೌಡರ ಗದಗ, ರೈತಸ್ನೇಹಿ ನಿವೃತ್ತ ಅಧಿಕಾರಿಗಳಾದ ಸುರೇಶ ಕುಂಬಾರ ಗದಗ ಇವರಿಗೆ ಸನ್ಮಾನ ಜರುಗಲಿದೆ.

ಪ್ರಸಾದ ಸುತಾರ ಹಾಗೂ ಗುರುನಾಥ ಸುತಾರ ಇವರಿಂದ ಸಂಗೀತ ಕಾರ್ಯಕ್ರಮ ಜರುಗಲಿದೆ. ಕಾರ್ಯಕ್ರಮದಲ್ಲಿ ಸಾಹಿತಿಗಳು, ಕನ್ನಡಾಭಿಮಾನಿಗಳು, ಪರಿಷತ್ತಿನ ಸದಸ್ಯರು ಭಾಗವಹಿಸಬೇಕೆಂದು ಕಾರ್ಯದರ್ಶಿ ಶಿವಾನಂದ ಗಿಡ್ನಂದಿ, ಕಿಶೋರಬಾಬು ನಾಗರಕಟ್ಟಿ, ಡಿ.ಎಸ್. ಬಾಪುರಿ, ದತ್ತಪ್ರಸನ್ನ ಪಾಟೀಲ, ಶ್ರೀಕಾಂತ ಬಡ್ಡೂರ ಪ್ರಕಟನೆಯಲ್ಲಿ ಕೋರಿದ್ದಾರೆ.

ಮುಖ್ಯ ಅತಿಥಿಗಳಾಗಿ ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿ ಎಂ.ಬಿ. ಸಂಕದ ಭಾಗವಹಿಸುವರು. 'ತಾಯಿಯ ಮಹತ್ವ' ವಿಷಯದ ಕುರಿತು ಸಿದ್ಧಲಿಂಗನಗರದ ಸರಕಾರಿ ಪ್ರೌಢಶಾಲೆಯ ಅಧ್ಯಾಪಕಿ ಸಂಜೀವಿನಿ ಕೂಲಗುಡಿ ಉಪನ್ಯಾಸ ನೀಡುವರು. ಹೆಸರಾಂತ ವೈದ್ಯರು ಹಾಗೂ ದತ್ತಿ ದಾನಿಗಳಾದ ಡಾ. ಧನೇಶ ದೇಸಾಯಿ ಉಪಸ್ಥಿತರಿರುವರು.

# ಜ. ಅ.ವಿದ್ಯಾ ಸಮಿತಿಯ ಶತಮಾನೋತ್ಸವ ಇಂದು

**■ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ**

ಮುಂಡರಗಿಯ ಶ್ರೀ ಜ.ಅನ್ನದಾನೀಶ್ವರ ವಿದ್ಯಾಸಮಿತಿಯ ಶತಮಾನೋತ್ಸವ ಸಂಭ್ರಮವು ಶಿರಹಟ್ಟಿ ತಾಲೂಕಿನ ಬನ್ನಿಕೊಪ್ಪ ಗ್ರಾಮದ ಶ್ರೀ ಜ.ಅ.ಪದವಿ ಪೂರ್ವ ಮಹಾವಿದ್ಯಾಲಯ ಹಾಗೂ ಪ್ರೌಢಶಾಲೆಯಲ್ಲಿ ನ.23ರಂದು ಬೆಳಿಗ್ಗೆ 10.30ಗಂಟೆಗೆ ಜರುಗಲಿದೆ.

ಕಾರ್ಯಕ್ರಮದ ಸಾನ್ನಿಧ್ಯವನ್ನು ಮುಂಡರಗಿಯ ತ್ರಿವಿಧ ದಾಸೋಹಿ ನಾಡೋಜ ಡಾ. ಅನ್ನದಾನೀಶ್ವರ ಮಹಾಶಿವಯೋಗಿಗಳು ವಹಿಸುವರು. ನೇತೃತ್ವವನ್ನು ಮುಂಡರಗಿಯ ಶ್ರೀ ಜ.ಅ. ಸಂಸ್ಥಾನಮಠದ ಉತ್ತರಾಧಿಕಾರಿ ಜ. ಡಾ. ಮಲ್ಲಿಕಾರ್ಜುನ ಸ್ವಾಮೀಜಿ, ಬನ್ನಿಕೊಪ್ಪ-ಮೈಸೂರು ಅರಮನೆ ಜಪದಕಟ್ಟೆಮಠದ ಡಾ. ಸುಜ್ಞಾನದೇವ ಶಿವಾಚಾರ್ಯ ಸ್ವಾಮೀಜಿ ವಹಿಸುವರು. ಅಧ್ಯಕ್ಷತೆಯನ್ನು ಸ್ಥಾ.ಅ.ಮಂಡಳಿ ಅಧ್ಯಕ್ಷ ಮಹಾವೀರ ಮಂಟಗಣಿ ವಹಿಸಲಿದ್ದಾರೆ. ಉಪನ್ಯಾಸಕರಾಗಿ ಖ್ಯಾತ ಜಾನಪದ ಸಾಹಿತಿ ಪ್ರೊ. ಶಂಭು ಬಳಿಗಾರ, ಮುಖ್ಯ ಅತಿಥಿಗಳಾಗ ರಾಮಸ್ವಾಮಿ ಹೆಗ್ಗಡಾಳ, ಗ್ರಾ.ಪಂ ಅಧ್ಯಕ್ಷೆ ಶೋಭಾ ಗುಡದೀರಪ್ಪ ಹೌಂಸಿ, ಬಿಇಓ ಎಚ್.ಎನ್. ನಾಣಕಿ ನಾಯಕ, ಡಾ. ಬಿ.ಜಿ. ಜವಳಿ, ಆರ್. ಆರ್. ಗಡ್ಡದ್ದೇವರಮಠ, ಪಕ್ಕಣ್ಣ ಹೌಂಸಿ, ಬಾಬಣ್ಣ ಕಲಾಲ, ಫಕ್ಕೀರಪ್ಪ ತಳವಾರ, ಶಿವಪ್ಪ ಸಜ್ಜನರ, ಡಾ. ಈಶ್ವರ ಸವಡಿ ಆಗಮಿಸಲಿದ್ದಾರೆ.

ಮಧ್ಯಾಹ್ನ 2.30ಕ್ಕೆ ಧಾರವಾಡ ಕೃಷಿ ವಿ.ವಿಯ ಕೃಷಿ ಅರಣ್ಯ ವಿಭಾಗದ ಪ್ರಾಧ್ಯಾಪಕ ಮತ್ತು ಮುಖ್ಯಸ್ಥ ಡಾ. ಹೆಚ್.ವಾಯ್. ಪಾಟೀಲ, ಕೃಷಿ ವಿ.ವಿಯ ತಾಂತ್ರಿಕ ಅಧಿಕಾರಿ ಎಸ್.ಎಂ. ಗಟನಟ್ಟಿ ಕೃಷಿ ಗೋಷ್ಠಿಯನ್ನು ನಡೆಸಲಿದ್ದಾರೆಂದು ಸಮಿತಿಯ ಪ್ರಕಟಣೆ ತಿಳಿಸಿದೆ.

**ಡಾ. ಹೆಚ್.ಕೆ. ಪಾಟೀಲ ಸೇವಾ ತಂಡದ ಆಶ್ರಯದಲ್ಲಿ**

# ಉಚಿತ ನೇತ್ರ ಪರೀಕ್ಷಾ ಶಿಬಿರ

**■ವಿಜಯಸಾಕ್ಷಿ ಸುದ್ದಿ, ಗದಗ**

ಹುಲಕೋಟಿಯ ಕೆ.ಎಚ್. ಪಾಟೀಲ ಆಸ್ಪತ್ರೆ ಹಾಗೂ ಸಂಶೋಧನಾ ಸಂಸ್ಥೆಯ ವತಿಯಿಂದ ಡಾ. ಹೆಚ್.ಕೆ. ಪಾಟೀಲ ಸೇವಾ ತಂಡದ ಸಹಯೋಗದಲ್ಲಿ ಗದಗ-ಬೆಟಗೇರಿಯ ವಾರ್ಡ್ ನಂ.5ರ ನರಸಾಪೂರ ಆಶ್ರಯ ಕಾಲೋನಿಯಲ್ಲಿ ಉಚಿತ ನೇತ್ರ ಪರೀಕ್ಷಾ ಶಿಬಿರ ಹಾಗೂ ಉಚಿತ ಆರೋಗ್ಯ ತಪಾಸಣಾ ಶಿಬಿರವನ್ನು ಆಯೋಜಿಸಲಾಗಿತ್ತು.



ಶಿಬಿರದಲ್ಲಿ ಕಾಂಗ್ರೆಸ್ ಮುಖಂಡರು ಹಾಗೂ ಹೆಚ್.ಕೆ. ಪಾಟೀಲ ಸೇವಾ ತಂಡದ ಕ್ಯಾಪ್ಟನ್ ಶಾಕೀರ ಕಾತರಕಿ, ಕಾಂಗ್ರೆಸ್ ಮೀನುಗಾರಿಕೆ ವಿಭಾಗ ಮುಂಚೂಣಿ ಘಟಕದ ಅಧ್ಯಕ್ಷ ಸಂಗಮೇಶ ಹಾದಿಮನಿ, ನಾಗರಾಜ ಮುಳ್ಳಾಳ, ಕಾಂಗ್ರೆಸ್ ಮುಖಂಡರಾದ ವಾಸು ಜೋಗಿಯವರ ಸಹಕಾರದೊಂದಿಗೆ 150ಕ್ಕೂ ಹೆಚ್ಚು ಜನರಿಗೆ ಆರೋಗ್ಯ ತಪಾಸಣೆ ಹಾಗೂ ಕಣ್ಣಿನ ತಪಾಸಣೆ ಮಾಡಲಾಯಿತು.

ಶಿಬಿರದಲ್ಲಿ ಕೆ.ಎಚ್. ಪಾಟೀಲ ಆಸ್ಪತ್ರೆ ಹಾಗೂ ಸಂಶೋಧನಾ ಸಂಸ್ಥೆಯ ವೈದ್ಯರ ತಂಡ ಹಾಗೂ ಸಿಬ್ಬಂದಿ ವರ್ಗದವರು ತಪಾಸಣೆ ನಡೆಸಿದರು. ಸಚಿವ ಎಚ್.ಕೆ. ಪಾಟೀಲರರ ಜನಪರ ಕಾರ್ಯಗಳಿಗೆ ಸಾರ್ವಜನಿಕರು ಪ್ರಶಂಸೆ ವ್ಯಕ್ತಪಡಿಸಿದರು.

**ಸಾರಿಗೆ ಬಸ್ ನೂಕುನುಗ್ಗಲು**

# ಟ್ರ್ಯಾಕ್ಟರ್ ಏರಿ ಮನೆ ಸೇರಿದ ವಿದ್ಯಾರ್ಥಿಗಳು

**■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ಬಸ್ ಸೌಲಭ್ಯದ ಕೊರತೆ ಬಹುತೇಕ ಎಲ್ಲ ಗ್ರಾಮಗಳಲ್ಲಿ ಕಂಡು ಬರುತ್ತಿದ್ದು, ನಿತ್ಯ ಮುಂಜಾನೆ ಶಾಲಾ-ಕಾಲೇಜುಗಳಿಗೆ, ನೌಕರಿಗೆ ತೆರಳುವವರಿಗೆ ಬಸ್ ಕೊರತೆಯಿಂದ ಸಮಸ್ಯೆ ಎದುರಿಸುತ್ತಿದ್ದಾರೆ. ಸಂಜೆ ವಾಪಸ್ಸು ಮನೆ ತಲುಪಲು ಸಹ ಕಷ್ಟವಾಗುತ್ತಿರುವ ಹಿನ್ನೆಲೆಯಲ್ಲಿ ಶಿಗ್ಲಿ ಗ್ರಾಮದಲ್ಲಿ ಶುಕ್ರವಾರ ಸಂಜೆ ಶಾಲಾ ಮಕ್ಕಳು ಬಸ್ ಗದ್ದಲವಿದ್ದದ್ದರಿಂದ ನಿಲ್ದಾಣದ ಹತ್ತಿರ ನಿಂತ ಟ್ರ್ಯಾಕ್ಟರ್ ಹತ್ತಿ ಮನೆ ಸೇರಿದ ಘಟನೆ ನಡೆದಿದೆ.



ಶಿಗ್ಲಿ ಗ್ರಾಮಕ್ಕೆ ಶಿಕ್ಷಣಕ್ಕಾಗಿ ಸುತ್ತಮುತ್ತಲಿನ ಸೂರಣಗಿ, ದೊಡ್ಡೂರು, ಶ್ಯಾಬಳ, ದೊಡ್ಡೂರು ತಾಂಡಾ, ಉಂಡೆನಹಳ್ಳಿ, ಉಳ್ಳಟ್ಟಿ ಸೇರಿದಂತೆ ಅನೇಕ ಗ್ರಾಮಗಳಿಂದ ನಿತ್ಯ ಶಾಲೆಗಳಿಗೆ ಬರುತ್ತಿದ್ದು, ಮುಂಜಾನೆ ಶಾಲೆಗೆ ಬರುವಾಗ ಹಾಗೂ ಸಂಜೆ ಶಾಲೆ ಬಿಟ್ಟ ವೇಳೆ ಬಸ್‌ಗಳ ಕೊರತೆ ಇದ್ದುದರಿಂದ ನಿತ್ಯ ಮಕ್ಕಳು ಸಮಸ್ಯೆ ಎದುರಿಸುವಂತಾಗಿದೆ. ಈ ಹಳ್ಳಿಗಳಿಗೆ ಸಂಜೆಯ ವೇಳೆಗೆ ಕೇವಲ ಒಂದೊಂದೇ ಬಸ್ ಸೌಲಭ್ಯವಿರುವದರಿಂದ ಬಸ್‌ಗಳಲ್ಲಿ ನೂಕುನುಗ್ಗಲು ಉಂಟಾಗುತ್ತಿದೆ.

ಇದರಿಂದ ಶುಕ್ರವಾರ ಮಕ್ಕಳು ಬಸ್ ನೂಕುನುಗ್ಗಲು ನೋಡಿಕೊಂಡು ಸಮೀಪದಲ್ಲಿ ನಿಂತಿದ್ದ ಅದೇ ಗ್ರಾಮಗಳ ಮಾರ್ಗವಾಗಿ ಹೋಗುತ್ತಿದ್ದ ಟ್ರ್ಯಾಕ್ಟರ್‌ನವರಿಗೆ ವಿನಂತಿಸಿ ಅದನ್ನು ಏರಿ ಪ್ರಯಾಣ ಬೆಳೆಸಿದ್ದಾರೆ. ಟ್ರ್ಯಾಕ್ಟರ್‌ನಲ್ಲಿಯೂ ಸಹ ಸಾಕಷ್ಟು ಮಕ್ಕಳು ಏರಿ ಕುಳಿತಿದ್ದು ಕಂಡು ಬಂದಿತು.

ದಿನನಿತ್ಯ ಮಕ್ಕಳಿಗೆ ಈ ತೊಂದರೆ ತಪ್ಪುತ್ತಿಲ್ಲ. ಅವರ ಶಾಲಾ-ಕಾಲೇಜುಗಳ ವೇಳೆಯಲ್ಲಿಯಾದರೂ ಹೆಚ್ಚಿನ ಬಸ್‌ಗಳನ್ನು ಒದಗಿಸಲು ಕ್ರಮ ಕೈಗೊಳ್ಳಬೇಕು. ಮಕ್ಕಳು ಬಸ್ ಗದ್ದಲದಲ್ಲಿ ಸಿಲುಕಿ ಸಮಸ್ಯೆ ಎದುರಿಸಿದ ಘಟನೆಗಳೂ ನಡೆದಿವೆ. ಆದ್ದರಿಂದ, ಶಾಲಾ ಮಕ್ಕಳಿಗೆ ಅನುಕೂಲವಾಗುವಚಿತೆ ಹೆಚ್ಚುವರಿ ಬಸ್‌ಗಳನ್ನು ಒದಗಿಸಲು ಸಾರಿಗೆ ಇಲಾಖೆ ಮುಂದಾಗಬೇಕೆಂದು ಗ್ರಾ.ಪಂ ಸದಸ್ಯ ಸಂತೋಷ ತಾಂದಳೆ ಮನವಿ ಮಾಡಿದ್ದಾರೆ.

# ತ್ರೈಮಾಸಿಕ ನಿರ್ವಹಣೆ: ವಿದ್ಯುತ್ ವ್ಯತ್ಯಯ

**■ವಿಜಯಸಾಕ್ಷಿ ಸುದ್ದಿ, ಗದಗ**


110 ಕೆವ್ಹಿ ಸಂಭಾಪೂರ ರೋಡ್ ವಿದ್ಯುತ್ ವಿತರಣಾ ಕೇಂದ್ರದಲ್ಲಿ ನ.26ರಂದು ತ್ರೈಮಾಸಿಕ ನಿರ್ವಹಣೆ ಕೆಲಸ ಕೈಗೊಳ್ಳುವುದರಿಂದ ಮುಂಜಾನೆ 10 ಗಂಟೆಯಿಂದ ಸಾಯಂಕಾಲ 5.30 ಗಂಟೆಯವರೆಗೆ ವಿದ್ಯುತ್ ಪೂರೈಕೆಯಲ್ಲಿ ವ್ಯತ್ಯಯ ಉಂಟಾಗುತ್ತದೆ. 110 ಕೆವ್ಹಿ ಸಂಭಾಪೂರ ರೋಡ್ ಉಪಕೇಂದ್ರದಿಂದ ಪೂರೈಕೆಯಾಗುವ ಎಲ್ಲಾ ನಗರ, ನಿರಂತರಜ್ಯೋತಿ, ಕೃಷಿ ನೀರಾವರಿ ಪಂಪ್‌ಸೆಟ್‌ಗಳ ಮಾರ್ಗಗಳು ಮತ್ತು ಗ್ರಾಮೀಣ ಪ್ರದೇಶಗಳ ಎಲ್ಲಾ 11 ಕೆವ್ಹಿ ವಿತರಣಾ ಮಾರ್ಗಗಳಲ್ಲಿ ವಿದ್ಯುತ್ ವ್ಯತ್ಯಯವಾಗಲಿದ್ದು, ಸಾರ್ವಜನಿಕರು ಸದರಿ ಪ್ರಕಟಣೆ ಗಮನಿಸಿ ಕಂಪನಿಯೊಂದಿಗೆ ಸಹಕರಿಸಬೇಕಾಗಿ ಪ್ರಕಟಣೆ ತಿಳಿಸಿದೆ.

**ಲಕ್ಕುಂಡಿಯಲ್ಲಿ ವಿಶ್ವ ಪರಂಪರಾ ಸಪ್ತಾಹ**

# ಸ್ಮಾರಕಗಳ ಸಂರಕ್ಷಣೆ ನಮ್ಮೆಲ್ಲರ ಹೊಣೆ

**■ವಿಜಯಸಾಕ್ಷಿ ಸುದ್ದಿ, ಲಕ್ಕುಂಡಿ**

ನಮ್ಮ ಪುರಾತನ ಕಾಲದ ಮೌಲ್ಯಯುತ ಸ್ಮಾರಕಗಳನ್ನು ಸಂರಕ್ಷಿಸುವ ಹೊಣೆ ನಮ್ಮೆಲ್ಲರದ್ದಾಗಿದೆ ಎಂದು ಧಾರವಾಡ ವಲಯದ ಭಾರತೀಯ ಪುರಾತತ್ವ ಸರ್ವೇಕ್ಷಣ ಇಲಾಖೆಯ ಸಹಾಯಕ ಅಧೀಕ್ಷಕ ಡಾ. ದೇವರಾಜು ಎಸ್.ಎಂ ಹೇಳಿದರು.



ಇಲ್ಲಿಯ ಪ್ರಾಚ್ಯ ವಸ್ತು ಸಂಗ್ರಾಲಯದ ಕೇಂದ್ರ ಸಂರಕ್ಷಿತ ಸ್ಮಾರಕವಾದ ಬ್ರಹ್ಮ ಜಿನಾಲಯದಲ್ಲಿ ಭಾರತೀಯ ಪುರಾತತ್ವ ಸರ್ವೇಕ್ಷಣ ಇಲಾಖೆ ಧಾರವಾಡ ವಲಯದ ಆಶ್ರಯದಲ್ಲಿ ಹಮ್ಮಿಕೊಂಡಿದ್ದ ವಿಶ್ವ ಪರಂಪರಾ ಸಪ್ತಾಹ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಪುರಾತನ ಕಾಲದ ವಾಸ್ತು ಶಿಲ್ಪ ಕಲೆಯು ಬೆಲೆಯುಳ್ಳದಾಗಿದ್ದು, ಸುಂದರ ಕೆತ್ತನೆಯಿಂದ ಕೂಡಿವೆ. ಅವುಗಳನ್ನು ಸಂರಕ್ಷಿಸಲು ವಿದ್ಯಾರ್ಥಿಗಳು ಗ್ರಾಮಸ್ಥರಲ್ಲಿ ಜಾಗೃತಿ ಮೂಡಿಸಬೇಕಾಗಿದೆ. ವಿದ್ಯಾರ್ಥಿ ದಿಸೆಯಲ್ಲಿಯೇ ತಮ್ಮೂರಿನ ಇತಿಹಾಸ, ಶಿಲ್ಪಕಲೆ, ದೇವಾಲಯಗಳ ಕುರಿತು ಅಧ್ಯಯನ ಮಾಡಬೇಕು. ಅಂದಾಗ ಮಾತ್ರ ಪ್ರವಾಸಿಗರು ತಮ್ಮ ಗ್ರಾಮಕ್ಕೆ ಬಂದಾಗ ತಾವು ಅವರಿಗೆ ಮಾಹಿತಿ ನೀಡಬಹುದು. ನ.19 ರಿಂದ 25ರವರೆಗೂ ವಿಶ್ವ ಪರಂಪರಾ ಸಪ್ತಾಹವನ್ನು ಪ್ರಪಂಚದಾದ್ಯಂತ ಆಚರಿಸಲಾಗುತ್ತಿದ್ದು, ಇದರ ಮುಖ್ಯ ಉದ್ದೇಶವೆಂದರೆ, ದೇಶದ ಸಾಂಸ್ಕೃತಿಕ ಪರಂಪರೆಯ ಪ್ರತೀಕವಾಗಿರುವ ಸ್ಮಾರಕಗಳ ಸಂರಕ್ಷಣೆ ಮತ್ತು ಮಹತ್ವ ಕುರಿತಂತೆ ವಿದ್ಯಾರ್ಥಿಗಳು ಮತ್ತು ಸಾರ್ವಜನಿಕರಲ್ಲಿ ಜಾಗೃತಿಯನ್ನು ಹೆಚ್ಚಿಸುವುದಾಗಿದೆ ಎಂದು ವಿವರಿಸಿದರು.

ದೈಹಿಕ ಶಿಕ್ಷಕಿ ಜ್ಯೋತಿ ಜೈಶೀಲಾ ಉಪಸ್ಥಿತರಿದ್ದರು. ಹಿರಿಯ ಸಂರಕ್ಷಣಾ ಅಧಿಕಾರಿ ಉಮೇಶ ಸ್ವಾಗತಿಸಿದರು. ಸ್ಮಾರಕ ಪ್ರಚಾರಕ ಸುರೇಶ ಪಾಪಳೆ ವಂದಿಸಿದರು. ಕಾರ್ಯಕ್ರಮದಲ್ಲಿ ಇಲಾಖೆಯ ಸಿಬ್ಬಂದಿಯವರು ಭಾಗವಹಿಸಿದ್ದರು.

ಸಪ್ತಾಹದಂಗವಾಗಿ ವಿಶ್ವ ಪಾರಂಪರಿಕ ತಾಣಗಳು ಮತ್ತು 'ಉತ್ತರ ಕರ್ನಾಟಕದ ವಾಸ್ತುವೈಭವ' ಛಾಯಾಚಿತ್ರ ಪ್ರದರ್ಶನವನ್ನು ನ.19ರಿಂದ 25ರವರೆಗೆ ಸಮೂಹ ಸ್ಮಾರಕಗಳ ಆವರಣ, ಪಟ್ಟದಕಲ್ಲು, ಬಾಗಲಕೋಟ ಜಿಲ್ಲೆ ಹಾಗೂ ವಿಜಯಪುರದ ಗೋಳ ಗುಮ್ಮಟ ಸ್ಮಾರಕ ಆವರಣದಲ್ಲಿ ಆಯೋಜಿಸಲಾಗಿದೆ ಎಂದು ವಿವರಿಸಿದ ಡಾ. ದೇವರಾಜು ಎಸ್.ಎಂ, ಲಕ್ಕುಂಡಿ ಸ್ಮಾರಕಗಳ ಮಹತ್ವ ಮತ್ತು ಶಿಲ್ಪ ಗ್ಯಾಲರಿಯಲ್ಲಿರುವ ಶಿಲ್ಪಗಳ ರಚನೆ ಮತ್ತು ಅವುಗಳ ಲಕ್ಷಣಗಳ ಕುರಿತು ಸರಕಾರಿ ಬಾಲಕಿಯರ ಪ್ರೌಢಶಾಲೆಯ ವಿದ್ಯಾರ್ಥಿಗಳ ಜೊತೆಗೆ ಸಂವಾದ ನಡೆಸಿದರು.


ಕರ್ನಾಟಕ ಸರ್ಕಾರ

**ಗ್ರಾಮ ಪಂಚಾಯತ ಕಾರ್ಯಾಲಯ ಶಿಗ್ಲಿ ತಾಲೂಕ ॥ ಲಕ್ಷ್ಮೇಶ್ವರ, ಜಿಲ್ಲಾ ॥ ಗದಗ**

ಸಂ: ಗ್ರಾ.ಪಂ.ಶಿ/ಮ.ಗಾಂ.ರಾ.ಗ್ರಾ.ಉ.ಖಾ.ಯೋಜನೆ/ದರಪಟ್ಟಿ/2024-25 ದಿನಾಂಕ : 21/11/2024

**ದರಪಟ್ಟಿ ಪ್ರಕಟಣೆ**

ಅಧ್ಯಕ್ಷರು/ಅಭಿವೃದ್ಧಿ ಅಧಿಕಾರಿಗಳು ಗ್ರಾಮ ಪಂಚಾಯತ ಶಿಗ್ಲಿ ಇವರು 2024-25ನೇ ಸಾಲಿನ ಮಹಾತ್ಮಗಾಂಧೀ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತ್ರಿ ಯೋಜನೆ ಅಡಿಯಲ್ಲಿ ಈ ಕೆಳಕಂಡ ಕಾಮಗಾರಿಗಳಿಗೆ ಅವಶ್ಯಕವಿರುವ ಐಟಂವಾರು ಸಾಮಗ್ರಿ ಮೊತ್ತಕ್ಕೆ ಸಾಮಗ್ರಿಗಳನ್ನು ಪೂರೈಸಲು ನೋಂದಾಯಿತ ಅರ್ಹ ವೆಂಡರ್/ಏಜೆನ್ಸಿಗಳಿಂದ ದರಪಟ್ಟಿಗಳನ್ನು ಆಹ್ವಾನಿಸಲಾಗಿದೆ. ಸದರಿ ಕಾಮಗಾರಿಗಳಿಗೆ ದರಪಟ್ಟಿ ಸಲ್ಲಿಸುವವರು ಗ್ರಾಮ ಪಂಚಾಯತಿಯಿಂದ ಖುದ್ದಾಗಿ ಖಾಲಿ ಟೆಂಡರ್ ಪಾರ್ಮ ಗಳನ್ನು ಪಡೆದು ಸಲ್ಲಿಸತಕ್ಕದ್ದು.

| ಕ್ರ ಸಂ | ಕಾಮಗಾರಿಗಳ ಹೆಸರು | ಟೆಂಡರ್ ಮೊತ್ತ (ರೂ. ಗಳಲ್ಲಿ) | ಖಾಲಿ ಟೆಂಡರ್ ಫಾರಂ ಬೆಲೆ (ರೂ. ಗಳಲ್ಲಿ) | ಷರಾ |
|---|---|---|---|---|
| 01 | ಶಿಗ್ಲಿ ಗ್ರಾಮದ ಸರಕಾರಿ ಹೆಣ್ಣುಮಕ್ಕಳ ಶಾಲಾ ಆವರಣದಲ್ಲಿ ಕೋಕೋ ಕೋಟ್ ನಿರ್ಮಾಣ | **67019** | **500** | ಖಾಲಿ ಟೆಂಡರ್ ಫಾರ್ಮ ಗ್ರಾಮ ಪಂಚಾಯತಿ-ಯಲ್ಲಿ ಪಡೆದು ಸಲ್ಲಿಸುವುದು |
| 02 | ಶಿಗ್ಲಿ ಗ್ರಾಮದ ಸರಕಾರಿ ಉರ್ದು ಶಾಲಾ ಆವರಣದಲ್ಲಿ ವಾಲಿಬಾಲ್ ಕೋಟ್ ನಿರ್ಮಾಣ | **56604** | **500** | |
| 03 | ಶಿಗ್ಲಿ ಗ್ರಾಮದ ವಾರ್ಡ ನಂ 2 ರಲ್ಲಿ ಭಾಷೆಸಾಬ ಶಿರಬಡಗಿ ಮನೆಯಿಂದ ಸೇವಾ ಮಂದಿರದವರೆಗೆ ಸಿ.ಸಿ. ರಸ್ತೆ ನಿರ್ಮಾಣ | **154768** | **500** | |
| 04 | ಶಿಗ್ಲಿ ಗ್ರಾಮದ ವಾರ್ಡ ನಂ 3 ರಲ್ಲಿ ಜ್ಯೋತಿ ಗು ಪಾಟೀಲ ಮನೆ ಹತ್ತಿರ ಸಿ.ಸಿ. ರಸ್ತೆ ನಿರ್ಮಾಣ | **74203** | **500** | |
| 05 | ಶಿಗ್ಲಿ ಗ್ರಾಮದ ವಾರ್ಡ ನಂ 4 ರಲ್ಲಿ ರುದ್ರಪ್ಪ ಕುಕನೂರ ಮನೆಯಿಂದ ಹೊಳಲಪ್ಪ ಟೋಕಾಳೆ ಮನೆವರೆಗೆ ಸಿ.ಸಿ. ರಸ್ತೆ ನಿರ್ಮಾಣ | **149820** | **500** | |
| 06 | ಶಿಗ್ಲಿ ಗ್ರಾಮದ ವಾರ್ಡ ನಂ 6 ರಲ್ಲಿ ಹೊನ್ನಪ್ಪ ಡಂಬ್ರಳ್ಳಿ ಮನೆಯಿಂದ ಬೆಟಗೇರಿಯವರ ಮನೆವರೆಗೆ ಸಿ.ಸಿ. ರಸ್ತೆ ನಿರ್ಮಾಣ | **40000** | **500** | |
| 07 | ಶಿಗ್ಲಿ ಗ್ರಾಮದ ವಾರ್ಡ ನಂ 7 ರಲ್ಲಿ ಯಲ್ಲಪ್ಪ ಮೇಗಲಮನಿ ಮನೆ-ಯಿಂದ ರೇಣುಕಾ ಕೆಂಗಮ್ಮನವರ ಮನೆವರೆಗೆ ಸಿ.ಸಿ. ಗಟಾರ ನಿರ್ಮಾಣ | **149820** | **500** | |
| 08 | ಶಿಗ್ಲಿ ಗ್ರಾಮದ ಗುರುಬಸಪ್ಪಜ್ಜ ನಗರದ ಹನಮಂತಪ್ಪ ಛಬ್ಬಿ ಮನೆಯಿಂದ ಫಕ್ಕೀರಪ್ಪ ಸೂರಣಗಿ ಮನೆವರೆಗೆ ಸಿ.ಸಿ. ಗಟಾರ ನಿರ್ಮಾಣ | **39000** | **500** | |

ಅರ್ಹ ವೆಂಡರ್/ಏಜೆನ್ಸಿಗಳಿಂದ ಖಾಲಿ ದರಪಟ್ಟಿ ಫಾರಂಗಾಗಿ ಅರ್ಜಿ ಸ್ವೀಕರಿಸುವ ದಿನಾಂಕ : **21/11/2024** ರಿಂದ **28/11/2024** ರವರೆಗೆ, ಖಾಲಿ ದರಪಟ್ಟಿ ಫಾರಂ ನೀಡುವ ದಿನಾಂಕ : **28/11/2024**, ಭರ್ತಿ ಮಾಡಿದ ದರಪಟ್ಟಿಗಳನ್ನು ಸ್ವೀಕರಿಸುವ ದಿನಾಂಕ : **28/11/2024** ಮುಂಜಾನೆ 10.00 ಗಂಟೆಯಿಂದ ಮಧ್ಯಾಹ್ನ 2.30 ಗಂಟೆವರೆಗೆ. ತೆರೆಯುವ ದಿನಾಂಕ ಹಾಗೂ ಸಮಯ : **28/11/2024** ರ ಮಧ್ಯಾಹ್ನ 3.00 ಗಂಟೆ

**ನಿಬಂಧನೆಗಳು** : (1) ಷರತ್ತು/ನಿಬಂಧನೆಗಳಿಗೆ, ಹೆಚ್ಚಿನ ಮಾಹಿತಿಗಾಗಿ ಕೆಲಸದ ದಿನಗಳಲ್ಲಿ ಹಾಗೂ ರಜಾ ದಿನಗಳನ್ನು ಹೊರತುಪಡಿಸಿ ಗ್ರಾಮ ಪಂಚಾಯತ ಶಿಗ್ಲಿಯಿಂದ ಮಾಹಿತಿ ಪಡೆಯಬಹುದಾಗಿದೆ. (2) ದರಪಟ್ಟಿಗಳನ್ನು ಅನುಮೋದಿಸುವ ಹಾಗೂ ತಿರಸ್ಕರಿಸುವ ಅಂತಿಮ ಅಧಿಕಾರ ಗ್ರಾಮ ಪಂಚಾಯತ ಹೊಂದಿರುತ್ತದೆ.

**ಸಹಿ/- ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳು**
**ಗ್ರಾಮ ಪಂಚಾಯತ ಶಿಗ್ಲಿ**

**ಸಹಿ/- ಅಧ್ಯಕ್ಷರು**
**ಗ್ರಾಮ ಪಂಚಾಯತ ಶಿಗ್ಲಿ**

ವಾಸಾಸಂಇ/ಗದಗ/ಕೆಎಸ್ಎಂಸಿಎ/401/2024-25


VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka